ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೬

**ಪಟ್ಟಿ – ೦೧**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೆರಡನೆಯ ಅಧಿವೇಶನ**

**ಸೋಮವಾರ, ದಿನಾಂಕ : ೨೧ನೇ ನವೆಂಬರ್, ೨೦೧೬**

---

## ಸಮೂಹ – I

೧. ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

೨. ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು.

೩. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

೪. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೫. ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು.

೬. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು.

೭. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

---

## ೩೭೧ (ಜೆ) ಅಡಿಯಲ್ಲಿ ಸ್ಥಾಪನೆಗೊಂಡ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುಷ್ಠಾನದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧ (೨೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೩೭೧ (ಜೆ) ಅಡಿಯಲ್ಲಿ ಸ್ಥಾಪನೆಗೊಂಡ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಇಲ್ಲಿಯವರೆಗೆ ಬಜೆಟ್‌ನಲ್ಲಿ ಘೋಷಣೆ ಮಾಡಿರುವ ಮೊತ್ತ ಹಾಗೂ ವಾಸ್ತವಿಕವಾಗಿ ಬಿಡುಗಡೆ ಮಾಡಿದ ಮೊತ್ತ ಎಷ್ಟು ;

(ಆ) ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಆದ ಖರ್ಚು ಎಷ್ಟು ; ಅನುಷ್ಠಾನಕ್ಕೆ ಆದ ಖರ್ಚು ಎಷ್ಟು; (ಜಿಲ್ಲಾವಾರು, ವರ್ಷಾವಾರು ಮಾಹಿತಿ ನೀಡುವುದು)

(ಇ) ಹೈದ್ರಾಬಾದ್– ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಮಾನವ ಸಂಪನ್ಮೂಲ ಅಭಿವೃದ್ಧಿಗಾಗಿ ಕೈಗೊಂಡ ಕಾರ್ಯಕ್ರಮಗಳೇನು; (ವಿವರ ನೀಡುವುದು)

(ಈ) ಹೈದ್ರಾಬಾದ್– ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಸ್ಥಾಪನೆಗೊಂಡ ವಿಶ್ವವಿದ್ಯಾಲಯಗಳಿಗೆ ಅನುದಾನ ಒದಗಿಸಲಾಗಿದೆಯೇ? (ವಿಶ್ವವಿದ್ಯಾಲಯವಾರು, ಯೋಜನೆವಾರು ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಯೋಜನೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨ (೩೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳು ಹಾಗೂ ಹರಪ್ಪನಹಳ್ಳಿಯಲ್ಲಿ ಕನ್ನಡ ಭಾಷೆ, ನೆಲ, ಜಲ ಹಾಗೂ ಸಂಸ್ಕೃತಿ ಉಳಿಸಿ/ಬೆಳೆಸುವ ಚಟುವಟಿಕೆಗಳಿಗಾಗಿ ಯಾವ ಕಾರ್ಯಕ್ರಮ/ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಗಳಿಗೆ "ಕನ್ನಡ ಭವನ" ನಿರ್ಮಾಣಕ್ಕಾಗಿ ಯೋಜನೆ ರೂಪಿಸಲಾಗಿದೆಯೇ; ಜಿಲ್ಲಾವಾರು, ಅನುದಾನವಾರು ಮಾಹಿತಿ ನೀಡುವುದು;

(ಇ) ಕಲಬುರಗಿ ವಿಭಾಗಕ್ಕೆ ಅನುದಾನ ನೀಡುವಲ್ಲಿ ಮಲತಾಯಿ ಧೋರಣೆ ಮಾಡಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಇಲ್ಲದಿದ್ದಲ್ಲಿ, ರಾಜ್ಯದ ವಿಭಾಗಾವಾರು ಬಿಡುಗಡೆಯಾದ ಅನುದಾನಗಳು ಹಾಗೂ ಕಲಾವಿದರ ಮಾಸಾಶನಗಳು ಹಾಗೂ ಇನ್ನಿತರೆ ಸಾಂಸ್ಕೃತಿಕ ಕಾರ್ಯಕ್ರಮಗಳ ಮಾಹಿತಿ ನೀಡುವುದು?

## ಕಲಬುರಗಿಯಲ್ಲಿ ಶಾಲಾ ಮಕ್ಕಳು ಶಾಲೆಯಿಂದ ಹೊರಗುಳಿದಿರುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩ (೩೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ವಿಭಾಗದಲ್ಲಿ ದೊಡ್ಡ ಸಂಖ್ಯೆಯಲ್ಲಿ ಮಕ್ಕಳು ಶಾಲೆಯಿಂದ ಹೊರಗುಳಿದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಜಿಲ್ಲಾವಾರು ಮಾಹಿತಿ ನೀಡುವುದು;

(ಆ) ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆ ಸಮೀಕ್ಷೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸಮೀಕ್ಷೆ, ಸಬಲ ಯೋಜನೆ ಸಮೀಕ್ಷೆ ಹಾಗೂ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮೀಕ್ಷೆಯ ಜಿಲ್ಲಾವಾರು ಪ್ರತ್ಯೇಕ ಮಾಹಿತಿ ನೀಡುವುದು?

## ಕಲಬುರಗಿ ನಗರದಲ್ಲಿ ೫೦೦ ಹಾಸಿಗೆ ಆಸ್ಪತ್ರೆ ನಿರ್ಮಾಣ ಹಾಗೂ ಅನುದಾನದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೪ (೨೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ನಗರದಲ್ಲಿ ೫೦೦ ಹಾಸಿಗೆಗಳ (Bed) ಆಸ್ಪತ್ರೆ ನಿರ್ಮಾಣಗೊಂಡು ಸಾರ್ವಜನಿಕ ಸೇವೆಗೆ ಸದ್ಬಳಕೆಯಾಗದೆ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದ್ಬಳಕೆಯಾಗದೆ ಇರುವುದಕ್ಕೆ ಕಾರಣಗಳೇನು; (ಮಾಹಿತಿ ನೀಡುವುದು)

(ಆ) ಸದರಿ ಆಸ್ಪತ್ರೆ ಕಟ್ಟಡ ನಿರ್ಮಾಣಕ್ಕಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು; ಹಾಗೂ ಕಟ್ಟಡವನ್ನು ನಿರ್ಮಾಣ ಮಾಡಲು ವಹಿಸಲಾದ ಏಜೆನ್ಸಿ ಯಾವುದು ; (ಮಾಹಿತಿ ನೀಡುವುದು)

(ಇ) ಸರ್ಕಾರದಿಂದ ಬಿಡುಗಡೆಯಾದ ಹಾಗೂ ಆ ಪೈಕಿ ಖರ್ಚಾದ ಒಟ್ಟು ಅನುದಾನ ಎಷ್ಟು ; ಸದರಿ ಆಸ್ಪತ್ರೆಯಲ್ಲಿ ಇರುವ ಸೌಲಭ್ಯಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸದರಿ ಕಟ್ಟಡ ಕಾಮಗಾರಿಯು ಕಳಪೆ ಗುಣಮಟ್ಟದ ಕಾಮಗಾರಿಯೆಂದು ಮೂರನೇ ವ್ಯಕ್ತಿ ತಪಾಸಣಾ ವರದಿ ನೀಡಿರುವುದು ನಿಜವೇ; ಹಾಗಿದ್ದಲ್ಲಿ, ಮೂರನೇ ವ್ಯಕ್ತಿ ತಪಾಸಣಾ ವರದಿಯ ಮಾಹಿತಿ ಹಾಗೂ ಕೈಗೊಂಡ ಕ್ರಮದ ಮಾಹಿತಿ ನೀಡುವುದು;

(ಉ) ಸದರಿ ಕಟ್ಟಡ ನಿರ್ಮಾಣ ಮಾಡುವಲ್ಲಿ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವಾಗಿರುವುದು ನಿಜವೇ? (ಮಾಹಿತಿ ನೀಡುವುದು)

## ಕಲಬುರಗಿಯಲ್ಲಿ "ವಿಭಾಗೀಯ ಪ್ರವಾಸೋದ್ಯಮ ಕಛೇರಿ" ಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೫ (೨೩) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿಯಲ್ಲಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲು ವಿಭಾಗೀಯ ಪ್ರವಾಸೋದ್ಯಮ ಕಛೇರಿಯನ್ನು ಸ್ಥಾಪಿಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸದರಿ ಕಛೇರಿಗೆ ಮಂಜೂರಾದ ಹುದ್ದೆಗಳು, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಮಾಹಿತಿ ಜೊತೆಗೆ ಕಛೇರಿಯ ಕಾರ್ಯಚಟುವಟಿಕೆಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಸದರಿ ಕಾರ್ಯಾಲಯವನ್ನು ಯಾವ ಉದ್ದೇಶಕ್ಕಾಗಿ ಸ್ಥಾಪಿಸಲಾಗಿದೆ, ಆ ಉದ್ದೇಶ ಸಂಪೂರ್ಣವಾಗಿ ವಿಫಲವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅದರ ಸಂಪೂರ್ಣ ಮಾಹಿತಿ ನೀಡುವುದು;

(ಇ) ಕಲಬುರಗಿ ವಿಭಾಗೀಯ ಪ್ರವಾಸೋದ್ಯಮ ಇಲಾಖೆಗೆ ಪ್ಯಾಕೇಜ್ ಟೂರ್ ಹಾಗೂ ಪ್ರವಾಸಿ ತಾಣಗಳ ವೀಕ್ಷಣೆಗೆ ಐರಾವತ ಬಸ್‌ಗಳನ್ನು ಮಂಜೂರು ಮಾಡಲು ಸರ್ಕಾರ ಮುಂದಾಗುವುದೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಈ) ಸದರಿ ಕಛೇರಿಯಡಿಯಲ್ಲಿ ಬಹುಮನಿ ಹೋಟೆಲ್‌ನ್ನು ಪಂಚತಾರಾ ಹೋಟಲಾಗಿ ನಿರ್ಮಾಣ ಮಾಡಲು ಸರ್ಕಾರ ಮುಂದಾಗುವುದೇ; ಇದ್ದಲ್ಲಿ, ವಿವರ ನೀಡುವುದು?

## ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ದಾಖಲಾತಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬ (೨೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ದಾಖಲಾತಿ ಪ್ರಮಾಣವು ದಿನೇ ದಿನೇ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾರಣವೇನು; (ವಿವರ ನೀಡುವುದು)

(ಆ) ಅಂಗನವಾಡಿ ಕೇಂದ್ರದ ಗುಣಮಟ್ಟವನ್ನು ಹೆಚ್ಚಿಸಿ, ಸುತ್ತಮುತ್ತಲಿನ ಮಕ್ಕಳನ್ನು ಆಕರ್ಷಣೆಗೊಳಿಸಿ ದಾಖಲಾತಿ ಸಂಖ್ಯೆ ಹೆಚ್ಚಿಸಲು ಸರ್ಕಾರ ಚಿಂತಿಸಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಅಂಗನವಾಡಿ ಕೇಂದ್ರದಲ್ಲಿ ಮಕ್ಕಳಿಗೆ ನೀಡಲಾಗುವ ಸೌಲಭ್ಯಗಳ ಪೂರ್ಣ ವಿವರ ನೀಡುವುದು;

(ಈ) ಅಂಗನವಾಡಿ ಕೇಂದ್ರದಲ್ಲಿ ಮಕ್ಕಳ ಆರೋಗ್ಯದ ಬಗ್ಗೆ ಕೈಗೊಂಡ ಕ್ರಮಗಳಾವುವು? (ವಿವರ ನೀಡುವುದು)

## ಔಷಧಗಳ ದರ ಇಳಿಕೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭ (೨೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಔಷಧಿಗಳ ದರ ಇಳಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ದರ ಇಳಿಕೆಗೆ ಸಂಬಂಧಪಟ್ಟಂತೆ ದಿನಾಂಕದೊಂದಿಗೆ ಮಾಹಿತಿ ನೀಡುವುದು;

(ಆ) ದರ ಇಳಿಕೆಯಾಗಿರುವ ಔಷಧಿಗಳು ಯಾವುವು; ಅವುಗಳ ಹೆಸರಿನೊಂದಿಗೆ ದರದ ಪಟ್ಟಿ ನೀಡುವುದು;

(ಇ) ಸಕ್ಕರೆ ಖಾಯಿಲೆ ಬಗ್ಗೆ ಸರ್ಕಾರ ಕಾಳಜಿ ವಹಿಸಿದೆಯೇ; ವಹಿಸಿದ್ದಲ್ಲಿ, ಯಾವ ಕ್ರಮ ವಹಿಸಲಾಗಿದೆ; (ವಿವರ ನೀಡುವುದು)

(ಈ) ಸಕ್ಕರೆ ಖಾಯಿಲೆ ಇರುವ ಗುಣಮಟ್ಟದ ಔಷಧಗಳಾವುವು; ಇದನ್ನು ಜನರಿಗೆ ಕೈಗೆಟಕುವ ದರದಲ್ಲಿ ವಿತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ವಿವರ ನೀಡುವುದು?

## ರಾಜ್ಯದ ಜಿಲ್ಲಾ ಆಸ್ಪತ್ರೆಗಳಲ್ಲಿ ಜನರಿಕ್ ಔಷಧ ಮಳಿಗೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮ (೨೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ಜಿಲ್ಲಾಸ್ಪತ್ರೆಗಳಲ್ಲಿ ಜನರಿಕ್ ಔಷಧದ ಮಳಿಗೆಗಳನ್ನು ತೆರೆಯಲಾಗಿದೆ;

(ಆ) ಸದರಿ ಮಳಿಗೆಗಳನ್ನು ಯಾವ ಯಾವ ಜಿಲ್ಲೆಗಳಲ್ಲಿ ತೆರೆಯಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇನ್ನುಳಿದ ಜಿಲ್ಲೆಗಳಲ್ಲಿ ಜನರಿಕ್ ಔಷಧ ಮಳಿಗೆಯನ್ನು ತೆರೆಯಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಮಂಡ್ಯ ನಗರದಲ್ಲಿನ ಡಾ: ಅಂಬೇಡ್ಕರ್ ಭವನದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯(೨೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ನಗರದ ಕೇಂದ್ರ ಸ್ಥಳದಲ್ಲಿ ಡಾ: ಅಂಬೇಡ್ಕರ್ ಭವನದ ಕಟ್ಟಡ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲಾಗಿದ್ದು ಯಾವಾಗ;

(ಆ) ಪ್ರಾರಂಭಿಸಿದ್ದಲ್ಲಿ, ಕಟ್ಟಡ ನಿರ್ಮಾಣ ಕಾರ್ಯದ ಪ್ರಗತಿ ಯಾವ ಹಂತದಲ್ಲಿದೆ;

(ಇ) ಈ ಭವನದ ಕಾಮಗಾರಿಯು ಆಮೆ ವೇಗದಲ್ಲಿ ನಡೆಯುತ್ತಿರುವ ಬಗ್ಗೆ ಸಾರ್ವಜನಿಕರಿಂದ ಆಕ್ರೋಶ ವ್ಯಕ್ತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸದರಿ ಕಾಮಗಾರಿಗೆ ಬಿಡುಗಡೆಯಾದ ಅನುದಾನ ಎಷ್ಟು; ಆ ಪೈಕಿ ಇದುವರೆವಿಗೆ ಖರ್ಚಾದ ಹಾಗೂ ಉಳಿಕೆಯಾದ ಮೊತ್ತವೆಷ್ಟು; (ವಿವರ ನೀಡುವುದು)

(ಉ) ಈ ಕಟ್ಟಡದ ಕಾಮಗಾರಿಯ ಗುತ್ತಿಗೆಯನ್ನು ಯಾವ ಸಂಸ್ಥೆಗೆ ನೀಡಲಾಗಿದೆ ? (ಸಂಸ್ಥೆಯ ಹೆಸರು, ವಿಳಾಸ ನೀಡುವುದು)

## ರಾಜ್ಯದ ಮೊರಾರ್ಜಿ ದೇಸಾಯಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳಲ್ಲಿ ಚಿತ್ರಕಲಾ ಶಿಕ್ಷಕರ ನೇಮಕ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ) :–**

೧೦(೧೦೩+೧೦೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮೊರಾರ್ಜಿ ದೇಸಾಯಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳಲ್ಲಿ ಚಿತ್ರಕಲಾ ಶಿಕ್ಷಕರ ನೇಮಕಾತಿಗೆ ಯಾವಾಗ ಅಧಿಸೂಚನೆ ಹೊರಡಿಸಲಾಗಿದೆ; ನೇಮಕಾತಿ ಪ್ರಕ್ರಿಯೆ ಕುರಿತು ಮಾಹಿತಿ ನೀಡುವುದು;

(ಆ) ನೇಮಕಾತಿ ಮಾಡಿಕೊಳ್ಳಲಾಗಿದೆಯೇ ; ಮಾಡಿಕೊಂಡಿದ್ದರೆ, ಎಷ್ಟು ಜನ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ ;

(ಇ) ಇಲ್ಲದಿದ್ದಲ್ಲಿ, ಚಿತ್ರಕಲಾ ಶಿಕ್ಷಕರ ನೇಮಕಾತಿಗೆ ಇರುವ ಗೊಂದಲಗಳೇನು; ಪರಿಹಾರಕ್ಕೆ ತೆಗೆದುಕೊಂಡ ಕ್ರಮಗಳೇನು ;

(ಈ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಮೊರಾರ್ಜಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳಿಗೆ ಒದಗಿಸಿರುವ ಕಟ್ಟಡ, ಮೂಲಭೂತ ಸೌಕರ್ಯ, ಸಿಬ್ಬಂದಿ, ಸಿ.ಸಿ. ಕ್ಯಾಮರಾ ಅಳವಡಿಕೆ ಕುರಿತು ಪ್ರತಿ ಶಾಲಾವಾರು ವಿವರ ನೀಡುವುದು;

(ಉ) ಕಳೆದ ೦೨ ವರ್ಷಗಳಲ್ಲಿ ಪ್ರತಿ ಶಾಲೆಗೆ ನೀಡಿರುವ ನಿರ್ವಹಣಾ ಅಭಿವೃದ್ಧಿ ಅನುದಾನ ಎಷ್ಟು ; ಕೈಗೊಂಡಿರುವ ದುರಸ್ಥಿ ಕಾರ್ಯಗಳು ಎಷ್ಟು ; ಮತ್ತು ಯಾವುವು? (ಪ್ರತಿ ಶಾಲಾವಾರು ವಿವರ ನೀಡುವುದು)

## ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ ಬೆಳಗಾವಿಯಲ್ಲಿನ ಹಾಸ್ಟೆಲ್‌ಗಳ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ) :–**

೧೧(೧೦೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ ಹಾಗೂ ಅದರ ಸ್ನಾತಕೋತ್ತರ ಕೇಂದ್ರ, ವಿಜಯಪುರದಲ್ಲಿ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೇರಿದ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿಗೆ ಇರುವ ಅವಕಾಶ ಎಷ್ಟು ;

(ಆ) ಅಲ್ಲಿರುವಂತಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ/ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇಲ್ಲಿ ಹಾಸ್ಟೆಲ್ ಮಂಜೂರಾತಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಗಂಗಾ ಕಲ್ಯಾಣ ಯೋಜನೆಯಡಿಯ ಕಾಮಗಾರಿಗಳ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ) :–**

೧೨(೧೦೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯ ಅಡಿಯಲ್ಲಿ ಗಂಗಾ ಕಲ್ಯಾಣ ಯೋಜನೆಯನ್ನು ಯಾವ ಯಾವ ನಿಗಮ/ಮಂಡಳಿ/ಇಲಾಖೆಯ ಮುಖಾಂತರ ಜಾರಿಗೊಳಿಸಲಾಗುತ್ತಿದೆ; ಕಳೆದ ೦೩ ವರ್ಷಗಳಲ್ಲಿ ಮಂಜೂರಾದ, ಕೊರೆದ ಹಾಗೂ ಕಾರ್ಯಾರಂಭ ಮಾಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು;

(ಆ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಕಳೆದ ೦೩ ವರ್ಷದ ಫಲಾನುಭವಿಗಳ ಹೆಸರು, ವಿವರ ಹಾಗೂ ಕಾಮಗಾರಿಗಳ ಹಂತದ ವಿವರ ನೀಡುವುದು;

(ಇ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಬೋರ್‌ವೆಲ್ ಕೊರೆಯುವುದನ್ನು ಕಂದಾಯ ಇಲಾಖೆ ತಡೆಯೊಡ್ಡಿ ಆದೇಶಿಸಿದೆ. ಈ ಆದೇಶದ ಮಧ್ಯೆ ಗಂಗಾ ಕಲ್ಯಾಣ ಯೋಜನೆ ಯಶಸ್ವಿಯಾಗಿ ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಉಪ್ಪಿನ ಪೊಟ್ಟಣದಲ್ಲಿ ರಾಸಾಯನಿಕ ಸೇರಿದ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೩(೨೦೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಡಿತರ ಅಂಗಡಿಗಳ ಮೂಲಕ ವಿತರಿಸುವ ಅನ್ನ ಭಾಗ್ಯ ಹೆಸರಿರುವ ಉಪ್ಪಿನ ಪೊಟ್ಟಣದಲ್ಲಿ ರಾಸಾಯನಿಕ ಮಿಶ್ರಣ ಸೇರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಮಿಶ್ರಣವನ್ನು ನೀರಿಗೆ ಬೆರೆಸಿದಾಗ ಸಾಬೂನಿನಂತೆ ಕರಗುತ್ತದೆ ಎಂದು ಈ ಕಲಬೆರಿಕೆ ಉಪ್ಪನ್ನು ಜನರು ಬಳಸದಿರುವುದು ನಿಜವೇ;

(ಇ) ಈ ಕಲಬೆರಿಕೆ ಉಪ್ಪು ಕೆಟ್ಟವಾಸನೆಯಿಂದ ಕೂಡಿದೆ ಎಂದು ಧಾರವಾಡ ಜಿಲ್ಲೆಯ ಉಪ್ಪಿನ ಬೆಟಗೇರಿ ಗ್ರಾಮಸ್ಥರು ದೂರಿರುವುದು ನಿಜವೇ;

(ಈ) ಹಾಗಿದ್ದಲ್ಲಿ, ಕಲಬೆರಿಕೆ ಉಪ್ಪಿನ ವಿತರಣೆಯನ್ನು ನಿಲ್ಲಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಹಾವು ಕಡಿತಕ್ಕೆ ಒಳಗಾದ ಜನರಿಗೆ ಔಷಧಿ ಕೊರತೆ

**ಶ್ರೀ ಬಸವರಾಜ ಎಸ್. ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೪(೬+೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಹಾವು ಕಡಿತದಿಂದ ಮೃತಪಟ್ಟಿರುವವರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಹಾವು ಕಡಿತಕ್ಕೊಳಪಟ್ಟು ಚಿಕಿತ್ಸೆ ಪಡೆದು ಗುಣಮುಖರಾದವರ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸಾರ್ವಜನಿಕ ಜಿಲ್ಲಾ ಆಸ್ಪತ್ರೆಗಳಲ್ಲಿ ಹಾವು ಕಡಿತ ಔಷಧ ಕೊರತೆಯಿಂದಾಗಿ ಸಕಾಲದಲ್ಲಿ ಚಿಕಿತ್ಸೆ ದೊರೆಯದೆ ಮೃತಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಹಾವು ಕಡಿತಕ್ಕೆ ಒಳಗಾದ ರೋಗಿಗಳ ಜೀವ ರಕ್ಷಣೆ ಮಾಡಲು ಸರ್ಕಾರದಿಂದ ಕೈಗೊಂಡ ಕ್ರಮಗಳೇನು;

(ಈ) ಸಾರ್ವಜನಿಕ ಜಿಲ್ಲಾ ಆಸ್ಪತ್ರೆಗಳಲ್ಲಿ ಹಾವು ಕಡಿತಕ್ಕೆ ಒಳಗಾದವರಿಗೆ ಔಷಧ ಪೂರೈಕೆಗೆ ಸರ್ಕಾರದಿಂದ ಒದಗಿಸಿದ ಅನುದಾನವೆಷ್ಟು; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಅನುದಾನ ಒದಗಿಸಿದಲ್ಲಿ ಹಾವು ಕಡಿತಕ್ಕೆ ಒಳಗಾದ ರೋಗಿಗಳ ಚಿಕಿತ್ಸೆಗಾಗಿ ಭರಿಸಿದ ಅನುದಾನವೆಷ್ಟು ;

(ಊ) ಸರ್ಕಾರವು ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಜಿಲ್ಲಾ ಆಸ್ಪತ್ರೆಯ ವರೆಗಿನ ಎಲ್ಲಾ ಸರ್ಕಾರಿ ಆಸ್ಪತ್ರೆಗಳಿಗೆ ವಿಷ ನಿರೋಧಕ ಔಷಧವನ್ನು ಸರಬರಾಜು ಮಾಡಲು ಚಿಂತನೆ ನಡೆಸಿದೆಯೇ; ಇಲ್ಲದಿದ್ದಲ್ಲಿ, ಎಲ್ಲಾ ಸರ್ಕಾರಿ ಆಸ್ಪತ್ರೆಗಳಿಗೆ ವಿಷ ನಿರೋಧಕ ಔಷಧವನ್ನು ಸರಬರಾಜು ಮಾಡಲು ಕೂಡಲೇ ಕ್ರಮ ಜರುಗಿಸುವುದೇ? (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

## ಸರ್ಕಾರದ ಎಲ್ಲಾ ಸಚಿವಾಲಯಗಳಲ್ಲಿ (Secretariate) ವೈಬ್ ಸೈಟ್ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಬಸವರಾಜ ಎಸ್. ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೫ (೮) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ಎಲ್ಲಾ ಸಚಿವಾಲಯಗಳು ತಮ್ಮದೇ ಆದ ಸ್ವಂತ ವೆಬ್ ಸೈಟ್ ಹೊಂದಿದೆಯೇ ;

(ಆ) ಸ್ವಂತ ವೆಬ್‌ಸೈಟ್‌ಗಳನ್ನು ಹೊಂದಿದ ಸಚಿವಾಲಯಗಳು ಯಾವುವು;

(ಇ) ಸಚಿವಾಲಯದಿಂದ ಹೊರಬೀಳುವ ಎಲ್ಲಾ ಆದೇಶಗಳು ಆಯಾ ಸಚಿವಾಲಯದ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಆಗದಿರುವುದು ನಿಜವೇ;

(ಈ) ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಉನ್ನತ ಶಿಕ್ಷಣ, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆಯ ಸಚಿವಾಲಯಗಳು ಸ್ವಂತ ವೆಬ್‌ಸೈಟ್ ಹೊಂದಿರುವುದು ನಿಜವೇ;

(ಉ) ಹಾಗಿದ್ದಲ್ಲಿ, ಈ ಸಚಿವಾಲಯಗಳಿಗೆ ಸ್ವಂತ ವೆಬ್‌ಸೈಟ್‌ನ್ನು ಹೊಂದಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು?

## ಕಿಮ್ಸ್ ಹುಬ್ಬಳ್ಳಿ ಇಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶುಶ್ರೂಷಕರನ್ನು ಖಾಯಂಗೊಳಿಸುವ ಕುರಿತು

**ಶ್ರೀ ಬಸವರಾಜ ಎಸ್. ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೬ (೯) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವೈದ್ಯಕೀಯ ಶಿಕ್ಷಣ ಸಂಸ್ಥೆ (ಕಿಮ್ಸ್) ಹುಬ್ಬಳ್ಳಿ, ಇಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಶುಶ್ರೂಷಕರ ಸಂಖ್ಯೆ ಎಷ್ಟು;

(ಆ) ಅವರುಗಳು ಯಾವ ವರ್ಷದಿಂದ ಕಾರ್ಯ ನಿರ್ವಹಿಸುತ್ತಿದ್ದರೆ, ಅವರುಗಳನ್ನು ಯಾವ ಆಧಾರದಲ್ಲಿ ನೇಮಕಾತಿ ಮಾಡಿಕೊಳ್ಳಲಾಗಿದೆ ;

(ಇ) ಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶುಶ್ರೂಷಕರುಗಳನ್ನು ಖಾಯಂಗೊಳಿಸುವ ಕುರಿತು ನಡೆಸುತ್ತಿರುವ ಮುಷ್ಕರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರಾಜ್ಯದ ಇತರೆ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಈಗಾಗಲೇ ಗುತ್ತಿಗೆ ನೌಕರರುಗಳನ್ನು ಖಾಯಂಗೊಳಿಸಿದಂತೆ ಕಿಮ್ಸ್ ಸಂಸ್ಥೆಯ ಶುಶ್ರೂಷಕರುಗಳನ್ನು ಖಾಯಂಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಆರೋಗ್ಯ ಇಲಾಖೆಯ ಸಿಬ್ಬಂದಿಗಳು

**ಶ್ರೀ ಬಸನಗೌಡ ಆರ್ ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭ (೯೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ; (ವೃಂದವಾರು ಮತ್ತು ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು; ನೇಮಕಾತಿ ಮಾಡಿಕೊಳ್ಳುವಲ್ಲಿ ವಿಳಂಬವಾಗಲು ಕಾರಣಗಳೇನು:

(ಇ) ಈ ಹುದ್ದೆಗಳು ಖಾಲಿ ಇರುವುದರಿಂದ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳ ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ಬರುವಂತಹ ಸಾರ್ವಜನಿಕರು ತುಂಬಾ ತೊಂದರೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮವೇನು ?

## ಭಾಗ್ಯಲಕ್ಷ್ಮಿ ಯೋಜನೆ

**ಶ್ರೀ ಬಸನಗೌಡ ಆರ್ ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೮ (೧೦೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯ನೇ ಸಾಲಿನ ವಿಜಯಪುರ ತಾಲ್ಲೂಕಿನ ಭಾಗ್ಯಲಕ್ಷ್ಮಿ ಯೋಜನೆಯಡಿಯಲ್ಲಿ ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಭಾಗ್ಯಲಕ್ಷ್ಮಿ ಬಾಂಡ್ ದೊರೆಯದೆ, ಫಲಾನುಭವಿಗಳು ತೊಂದರೆಗೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ೨೦೧೯ನೇ ಸಾಲಿನ ವಿಜಯಪುರ ತಾಲ್ಲೂಕಿನಲ್ಲಿ ಭಾಗ್ಯಲಕ್ಷ್ಮಿ ಯೋಜನೆ ಅಡಿಯಲ್ಲಿ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ; (ಫಲಾನುಭವಿಗಳ ಹೆಸರು, ವಿಳಾಸ ಸಹಿತ ಸಂಪೂರ್ಣ ಮಾಹಿತಿ ನೀಡುವುದು)

(ಇ) ಆಯ್ಕೆಯಾದ ಫಲಾನುಭವಿಗಳಿಗೆ ಎಷ್ಟು ಜನರಿಗೆ ಬಾಂಡ್ ನೀಡಲಾಗಿದೆ ; ಇನ್ನು ಎಷ್ಟು ಜನರಿಗೆ ಬಾಂಡ್ ನೀಡುವುದು ಬಾಕಿ ಉಳಿದಿವೆ ; ಬಾಂಡ್ ನೀಡಲು ಇಷ್ಟು ವಿಳಂಬವಾಗಲು ಕಾರಣವೇನು ; ವಿಳಂಬವಾಗಿರುವುದಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ಯೋಜನೆಗಳು

**ಶ್ರೀ ಬಸನಗೌಡ ಆರ್ ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯ (೯೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಜಾರಿಯಲ್ಲಿರುವ ಯೋಜನೆಗಳಾವುವು ; (ಯೋಜನೆವಾರು ವಿವರ ನೀಡುವುದು)

(ಆ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಸರ್ಕಾರವು ಜಾರಿಗೆ ತಂದಿರುವ ಈ ಯೋಜನೆಗಳಿಗೆ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಿಗೆ ಎಷ್ಟು ಅನುದಾನ ಮೀಸಲಿರಿಸಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಈ ಯೋಜನೆಗಳಿಗೆ ಫಲಾನುಭವಿಗಳನ್ನು ಯಾವ ಮಾನದಂಡದ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತಿದೆ; (ವಿವರವಾದ ಮಾಹಿತಿ ನೀಡುವುದು)

(ಈ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಯಾವ ಯಾವ ಯೋಜನೆಗಳಲ್ಲಿ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ? (ಯೋಜನೆವಾರು ಹಾಗೂ ತಾಲ್ಲೂಕುವಾರು ಫಲಾನುಭವಿಗಳ ಹೆಸರು ಸಮೇತ ವಿವರವಾದ ಮಾಹಿತಿ ನೀಡುವುದು)

## ಪ್ರವಾಸೋದ್ಯಮ ಇಲಾಖೆಯಲ್ಲಿನ ಮೂಲಭೂತ ಸೌಕರ್ಯಗಳಿಗೆ ಒದಗಿಸಿದ ಹಣದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೦ (೮೪) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬-೧೭ನೇ ಸಾಲಿನಲ್ಲಿ ಪ್ರವಾಸೋದ್ಯಮ ಇಲಾಖೆಯಲ್ಲಿನ ಮೂಲಭೂತ ಸೌಕರ್ಯಗಳಿಗೆ ನಿಗಧಿಪಡಿಸಿರುವ ಹಣವೆಷ್ಟು; ಈ ಹಣವನ್ನು ಯಾವ ಯಾವ ಪ್ರವಾಸೋದ್ಯಮ ಕಾಮಗಾರಿಗಳಿಗೆ ವಿನಿಯೋಗಿಸಬಹುದಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) ೨೦೧೬-೧೭ನೇ ಸಾಲಿನ ಮುಂದುವರಿದ ಪ್ರವಾಸೋದ್ಯಮ ಮೂಲಭೂತ ಸೌಕರ್ಯ ಕಾಮಗಾರಿಗಳಿಗೆ ಎಷ್ಟು ಹಣ ಮಂಜೂರು ಮಾಡಿ ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು, ಕಾಮಗಾರಿವಾರು ಮಾಹಿತಿ ನೀಡುವುದು)

(ಇ) ೨೦೧೬-೧೭ನೇ ಸಾಲಿನ ಹೊಸದಾಗಿ ಪ್ರವಾಸೋದ್ಯಮ ಮೂಲಭೂತ ಸೌಕರ್ಯ ಕಾಮಗಾರಿಗಳಿಗೆ ಎಷ್ಟು ಹಣ ಮಂಜೂರು ಮಾಡಿ ಬಿಡುಗಡೆ ಮಾಡಲಾಗಿದೆ ? (ಜಿಲ್ಲಾವಾರು, ಕಾಮಗಾರಿಗಳ ಹೆಸರು ಸಮೇತ ಮಾಹಿತಿ ನೀಡುವುದು)

## ರಾಜ್ಯ ಪ್ರವಾಸೋದ್ಯಮ ನಿಗಮದಿಂದ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಟ್ಯಾಕ್ಸಿ ಸೇವೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):-**

೨೧ (೮೫) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ನಿಗಮ (KSTDC) ದಿಂದ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ (KIAL) ದಲ್ಲಿ ಪೋಸ್ಟ್‌ಪೇಯ್ಡ್ ಟ್ಯಾಕ್ಸಿ ಸೇವೆಯನ್ನು ಯಾವಾಗ ಪ್ರಾರಂಭಿಸಲಾಯಿತು ;

(ಆ) ಪೋಸ್ಟ್‌ಪೇಯ್ಡ್ ಟ್ಯಾಕ್ಸಿ ಸೇವೆಯ ಪಾರ್ಕಿಂಗ್ ಶುಲ್ಕ ಮತ್ತು ನಿರ್ವಹಣೆಯಲ್ಲಿ ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಏನು ಕ್ರಮ ಕೈಗೊಂಡಿದ್ದೀರಿ ; (ವಿವರವಾದ ಮಾಹಿತಿ ಕೊಡುವುದು)

(ಈ) ಟ್ಯಾಕ್ಸಿ ಸೇವೆ ಉತ್ತಮಪಡಿಸುವ ಸಂಬಂಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರವಾದ ಮಾಹಿತಿ ಕೊಡುವುದು)

(ಉ) ಹಾಲಿ ಈಗ ಎಷ್ಟು ಹೊಸ ಟ್ಯಾಕ್ಸಿ ಸಂಯೋಜನೆಗೆ ಯಾರಿಗೆ ಅನುಮತಿ ನೀಡಲಾಗಿದೆ, ಇದಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರವಾದ ಮಾಹಿತಿ ಕೊಡುವುದು)

(ಊ) ಗ್ರಾಮೀಣ ವಿದ್ಯಾವಂತ ಪದವೀಧರರಿಗೆ ಅನುಕೂಲವಾಗುವಂತೆ ಈ ಯೋಜನೆಯನ್ನು ರೂಪಿಸಲು ಸರ್ಕಾರ ಕ್ರಮ ಹಾಕಿಕೊಂಡಿದೆಯೇ?

## ಆಹಾರ ಧಾನ್ಯ ಒದಗಿಸಲು ಹಣ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೨ (೮೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ಯಾವ ಯಾವ ಸಂಸ್ಥೆಗಳಿಗೆ ರೈತರಿಂದ ಆಹಾರ ಧಾನ್ಯಗಳನ್ನು ಖರೀದಿಸಲು ಹಣ ಒದಗಿಸಲು ಸಂಬಂಧ ಬ್ಯಾಂಕ್ ಗ್ಯಾರಂಟಿಗಳನ್ನು ನೀಡಿದೆ ಹಾಗೂ ಎಷ್ಟು ಮೊತ್ತಕ್ಕೆ ನೀಡಲಾಗಿದೆ; (ಸಂಸ್ಥೆಯ ಹೆಸರು, ಬ್ಯಾಂಕ್ ಗ್ಯಾರಂಟಿ ನೀಡಿದ ಮೊತ್ತದೊಂದಿಗೆ ಮಾಹಿತಿ ಕೊಡುವುದು)

(ಆ) ಸದರಿ ಸಂಸ್ಥೆಗಳು ಯಾವ ಯಾವ ಬ್ಯಾಂಕುಗಳಿಂದ ಎಷ್ಟು ಹಣವನ್ನು ಸಾಲ ಪಡೆದಿವೆ; ಅದಕ್ಕೆ ಬಡ್ಡಿ ಎಷ್ಟು ; (ವಿವರವಾಗಿ ಬ್ಯಾಂಕ್‌ವಾರು, ಸಂಸ್ಥೆವಾರು ಮಾಹಿತಿ ಕೊಡುವುದು)

(ಇ) ಸದರಿ ಸಂಸ್ಥೆಗಳು ಈ ಹಣವನ್ನು ಯಾವ ಯಾವ ಬಾಬ್ತುಗಳಿಗೆ ಉಪಯೋಗ ಮಾಡಿಕೊಂಡಿವೆ ? (ವಿವರವಾದ ಮಾಹಿತಿ ನೀಡುವುದು)

## ಹೊಸ ನ್ಯಾಯಬೆಲೆ ಅಂಗಡಿಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩ (೮೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ;

(ಆ) ಹೊಸದಾಗಿ ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಎಷ್ಟು ಅರ್ಜಿಗಳು ಬಂದಿವೆ, ಅನುಮತಿ ನೀಡಬೇಕಾದರೆ ಅದಕ್ಕಿರುವ ಮಾನದಂಡಗಳೇನು ;

(ಇ) ಹೊಸದಾಗಿ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವಾಗ ಪರಿಶಿಷ್ಟ ಜಾತಿ ಮತ್ತು ವರ್ಗದವರಿಗೆ ಮೀಸಲಾತಿ ನೀಡಲಾಗುವುದೇ ?

## ಹಿಂದುಳಿದ ವರ್ಗಗಳ ಇಲಾಖೆಯಲ್ಲಿರುವ ಖಾಲಿ ಹುದ್ದೆಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪ (೮೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳನ್ನು ಭರ್ತಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಹುದ್ದೆಗಳು ಖಾಲಿ ಇರುವುದರಿಂದ ಹಿಂದುಳಿದ ವರ್ಗಗಳಿಗೆ ಸರ್ಕಾರದಿಂದ ತಲುಪಬೇಕಾದ ಸೌಲಭ್ಯಗಳು ತಲುಪದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹೊಸ ನೇಮಕಾತಿ ಆಗುವವರೆಗೂ ಬೇರೆ ಇಲಾಖೆಗಳಿಂದ ಎರವಲು ಸೇವೆ ಪಡೆದು ಇಲಾಖೆಯ ಕಾರ್ಯಕ್ರಮಗಳು ಸಮರ್ಪಕವಾಗಿ ಅನುಷ್ಠಾನವಾಗುವಂತೆ ಮಾಡಲಾಗುವುದೇ ?

## ಪರಿಶಿಷ್ಟ ಜಾತಿ ಮತ್ತು ವರ್ಗಗಳಿಗೆ ಸೇರಿಸಿದ ಜಾತಿಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫ (೮೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಡಾ: ಅಂಬೇಡ್ಕರ್ ಅವರ ಸಂವಿಧಾನವನ್ನು ರಚನೆ ಮಾಡಿದಾಗ ಮೀಸಲಾತಿ ನೀಡಿದ ಜಾತಿಗಳು ಎಷ್ಟು ; ಅವು ಯಾವುವು ;

(ಆ) ನಂತರ ಹೊಸದಾಗಿ ಸೇರಿಸಿದ ಜಾತಿಗಳು ಯಾವುವು ;

(ಇ) ಬೇರೆ ಬೇರೆ ಜಾತಿಗಳನ್ನು ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವರ್ಗಕ್ಕೆ ಸೇರಿಸಿದ್ದರಿಂದ ನಿಜವಾದ ಅಸ್ಪೃಶ್ಯರಿಗೆ ಅನ್ಯಾಯಾಗಲಿಲ್ಲವೆ;

(ಈ) ಇನ್ನೂ ಯಾವ ಯಾವ ಜಾತಿಗಳನ್ನು ಈ ಪಟ್ಟಿಗೆ ಸೇರಿಸಬೇಕೆಂಬ ಒತ್ತಾಯ ಬಂದಿದೆ ;

(ಉ) ನಿಜವಾಗಿ ಅಸ್ಪೃಶ್ಯರಾಗಿರುವವರ ಹಿತಾಸಕ್ತಿಗಳನ್ನು ಕಾಪಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ?

## ರಾಜ್ಯದಲ್ಲಿ ಪ್ರಾಧಿಕಾರಗಳು ಹಾಗೂ ಅಭಿವೃದ್ಧಿ ಮಂಡಳಿಗಳ ರಚನೆಯಿಂದ ರಾಜ್ಯದ ವಿವಿಧ ಆರ್ಥಿಕ ಯೋಜನೆಗಳ ಅನುಷ್ಠಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೫೬ (೯೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪ್ರಾದೇಶಿಕ ಅವಶ್ಯಕತೆಗಳನ್ನು ಗಮನಿಸುತ್ತಾ ಅಭಿವೃದ್ಧಿಗೆ ವೇಗ ಒದಗಿಸಲು ಇರುವ ಪ್ರಾಧಿಕಾರಗಳು ಯಾವುವು ಮತ್ತು ಅವುಗಳು ಯಾವಾಗಿನಿಂದ ಕಾರ್ಯನಿರ್ವಹಿಸುತ್ತಿವೆ ; (ಉದಾ: ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಮತ್ತು ಮಲೆನಾಡು ಅಭಿವೃದ್ಧಿ ಪ್ರಾಧಿಕಾರ ಮುಂತಾದವು)

(ಆ) ಇವುಗಳಲ್ಲಿ ನೀಡಿರುವ ನಿರ್ದಿಷ್ಟ ಕೆಲಸಗಳ ವಿವರ ನೀಡುವುದು;

(ಇ) ಈ ಪ್ರಾಧಿಕಾರಗಳು ಹಾಗೂ ಅಭಿವೃದ್ಧಿ ಮಂಡಳಿಗಳ ರಚನೆಯಿಂದ ರಾಜ್ಯದ ವಿವಿಧ ಆರ್ಥಿಕ ಯೋಜನೆಗಳ ಅನುಷ್ಠಾನಗಳಿಗೆ ಹಾಗೂ ಅಲ್ಲಿನ ಅಭಿವೃದ್ಧಿಗೆ ಎಷ್ಟು ಲಾಭವಾಗಿದೆ ಎನ್ನುವುದನ್ನು ಅಭ್ಯಸಿಸಲಾಗಿದೆಯೇ; ಇದ್ದಲ್ಲಿ, ವಿವರ ನೀಡುವುದು ; ಇಲ್ಲದಿದ್ದಲ್ಲಿ, ಈ ಕುರಿತಾಗಿ ಸರ್ಕಾರ ಏನು ಯೋಚನೆ ನಡೆಸಿದೆ ?

## ರಾಜ್ಯದಲ್ಲಿ ಪೌಷ್ಟಿಕಾಂಶಗಳ ಕೊರತೆಯಿಂದ ಬಳಲುತ್ತಿರುವ ಮಕ್ಕಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೬ (೧೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪೌಷ್ಟಿಕಾಂಶಗಳ ಕೊರತೆಯಿಂದ ಬಳಲುತ್ತಿರುವ ೧ ರಿಂದ ೬ ವಯಸ್ಸಿನ ಮಕ್ಕಳ ಸರಾಸರಿ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕುರಿತಾಗಿ ಲಭ್ಯವಿರುವ ರಾಜ್ಯದ ಸರಾಸರಿ ಎಷ್ಟು ;

(ಇ) ಪೌಷ್ಟಿಕಾಂಶ ಕೊರತೆ ಹಾಗೂ ರಕ್ತ ಹೀನತೆಯಿಂದ ಸರಾಸರಿ ಎಷ್ಟು ಗರ್ಭಿಣಿಯರು ಬಳಲುತ್ತಿದ್ದಾರೆ ; ಈ ಕುರಿತಾಗಿರುವ ರಾಷ್ಟ್ರದ ಸರಾಸರಿ ಎಷ್ಟು ;

(ಈ) ರಾಜ್ಯದಲ್ಲಿ ೧ ರಿಂದ ೬ ವರ್ಷದ ಮಕ್ಕಳ ಹಾಗೂ ಗರ್ಭಿಣಿ ಸ್ತ್ರೀಯರ ರಕ್ತ ಹೀನತೆ ಹಾಗೂ ಪೌಷ್ಠಿಕಾಂಶ ಆಹಾರದ ಕೊರತೆ ನೀಗಿಸಲು ಸರ್ಕಾರ ಯಾವ ಯೋಜನೆಯನ್ನು ಕೈಗೆತ್ತಿಕೊಂಡಿದೆ?

## ಮಕ್ಕಳ ಕ್ರಿಯಾ ಯೋಜನೆಯ ಗುರಿಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೭ (೧೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಮಕ್ಕಳ ಕ್ರಿಯಾ ಯೋಜನೆ ೨೦೦೯–೨೦೧೦ ರಲ್ಲಿ ನಿಗಧಿಪಡಿಸಲಾಗಿದ್ದ ಗುರಿಗಳು ಯಾವುವು ; (ವಿವರ ನೀಡುವುದು)

(ಆ) ಈ ಗುರಿಗಳನ್ನು ಸಾಧಿಸಲು ಖರ್ಚು ಮಾಡಿರುವ ಹಣವೆಷ್ಟು;

(ಇ) ಅವುಗಳಲ್ಲಿ ಯಾವ ಯಾವ ಗುರಿಗಳನ್ನು ಸಾಧಿಸಲಾಗಿದೆ ;

(ಈ) ಯಾವ್ಯಾವ ಗುರಿಗಳನ್ನು ಸಾಧಿಸಲಾಗಿಲ್ಲ ಮತ್ತು ಅದಕ್ಕೆ ಕಾರಣಗಳೇನು ? (ವಿವರ ನೀಡುವುದು)

# ರಾಜ್ಯದಲ್ಲಿರುವ ಎಲ್ಲಾ ಜಿಲ್ಲೆಗಳಲ್ಲಿ, ಎಲ್ಲಾ ವಿಭಾಗಗಳಲ್ಲೂ ಅಭಿವೃದ್ಧಿಯ ವೇಗ ಹಾಗೂ ಗುಣಮಟ್ಟ ಕಾಪಾಡಲು ತೆಗೆದುಕೊಂಡಿರುವ ಕ್ರಮ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೮ (೯೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇರುವ ಎಲ್ಲಾ ಜಿಲ್ಲೆಗಳಲ್ಲಿ, ಎಲ್ಲಾ ವಿಭಾಗಗಳಲ್ಲೂ ಅಭಿವೃದ್ಧಿಯ ವೇಗ ಹಾಗೂ ಅಭಿವೃದ್ಧಿಯ ಗುಣಮಟ್ಟ ಒಂದೇ ರೀತಿಯಾಗಿ, ತಾರತಮ್ಯದ ಭಾವನೆ ಬರದಿರುವಂತೆ ಸಮನ್ವಯ ಕಾಪಾಡಿಕೊಳ್ಳಲು ಸರ್ಕಾರ ಯಾವ ರೀತಿ ಯೋಚನೆ ನಡೆಸಿದೆ;

(ಆ) ಈ ಯೋಜನೆಗಳನ್ನು ರೂಪಿಸುವಾಗ ಭೌಗೋಳಿಕ ಮತ್ತು ಪ್ರಾದೇಶಿಕ ಲಕ್ಷಣಗಳನ್ನು ಹಾಗೂ ಸಾಮರ್ಥ್ಯಗಳನ್ನು ಹಾಗೂ ಕೊರತೆಗಳನ್ನು ಗಮನದಲ್ಲಿರಿಸಿ ಅದಕ್ಕನುಗುಣವಾಗಿ ಯೋಜನೆ ರೂಪಿಸಲಾಗುತ್ತಿದೆಯೇ ; (ವಿವರ ನೀಡುವುದು)

(ಇ) ಪ್ರಾದೇಶಿಕ ತಾರತಮ್ಯಗಳ ಭಾವನಾತ್ಮಕವಾದ ಸಂಗತಿಗಳನ್ನು ಗಮನಿಸದಿದ್ದಲ್ಲಿ, ಪ್ರತ್ಯೇಕತೆಯ ಬೇಡಿಕೆಗಳ ಸಾಧ್ಯತೆ ಹೆಚ್ಚಾಗಿರುವುದರಿಂದ ಈ ಕುರಿತಾಗಿ ಯೋಜನೆ ರೂಪಿಸಲಾಗಿದೆಯೇ? (ವಿವರ ನೀಡುವುದು)

# ರಾಷ್ಟ್ರಮಟ್ಟದಲ್ಲಿ ಸ್ಮರಣೀಯ ಸೇವೆ ಸಲ್ಲಿಸಿದ ಮಹಿಳೆಯರಿಗೆ ಕಿತ್ತೂರ ರಾಣಿ ಚೆನ್ನಮ್ಮ ಪ್ರಶಸ್ತಿ ನೀಡುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯ (೬೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಅಥವಾ ರಾಷ್ಟ್ರ ಮಟ್ಟದಲ್ಲಿ ಸ್ಮರಣೀಯ ಸೇವೆ ಮಾಡಿರುವ ರಾಜ್ಯದ ಮಹಿಳೆಯೊಬ್ಬರಿಗೆ ವೀರ ಕಿತ್ತೂರ ರಾಣಿ ಚೆನ್ನಮ್ಮಳ ಸವಿನೆನಪಿಗಾಗಿ ರಾಣಿ ಚೆನ್ನಮ್ಮ ಪ್ರಶಸ್ತಿ ನೀಡುವ ವಿಚಾರ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಪ್ರಶಸ್ತಿಗೆ ಅರ್ಹರನ್ನು ಆಯ್ಕೆ ಮಾಡುವ, ನಿಗಧಿಪಡಿಸಿರುವ ಮಾನದಂಡಗಳು ಹಾಗೂ ವಿಧಿ ವಿಧಾನಗಳೇನು;

(ಇ) ಪ್ರಶಸ್ತಿಗೆ ನಿಗಧಿಪಡಿಸಿರುವ ಬಹುಮಾನದ ಮೊತ್ತವೆಷ್ಟು ;

(ಈ) ಪ್ರಶಸ್ತಿಯನ್ನು ನೀಡುವ ಕುರಿತು ಸರ್ಕಾರವು ಕೈಗೊಂಡಿರುವ ಕ್ರಮ ಏನು ?

## ಉತ್ತರ ಕರ್ನಾಟಕ ಭಾಗದ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦ (೬೭) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕರ್ನಾಟಕ ಭಾಗದ ಪ್ರವಾಸಿ ತಾಣಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದಿರುವುದರಿಂದ ಪ್ರವಾಸಿಗರ ಸಂಖ್ಯೆ ಆ ಭಾಗದಲ್ಲಿ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಉತ್ತರ ಕರ್ನಾಟಕ ಭಾಗದ ಪ್ರೇಕ್ಷಣೀಯ ಪ್ರವಾಸಿ ತಾಣಗಳಲ್ಲಿ ಸರ್ಕಾರವು ೨೦೧೩–೧೪, ೨೦೧೪–೧೫,

೨೦೧೫–೧೬ನೇ ಸಾಲಿನಲ್ಲಿ ಕೈಗೊಂಡ ಮೂಲಭೂತ ಅಭಿವೃದ್ಧಿ ಕಾಮಗಾರಿಗಳು ಯಾವುವು ; ಯಾವ ಯಾವ ಪ್ರವಾಸಿ ಸ್ಥಳಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ ;

(ಇ) ೨೦೧೩–೧೪, ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಬಿಡುಗಡೆ ಮಾಡಿದ ಅನುದಾನವೆಷ್ಟು; ಯಾವ ಯಾವ ಪ್ರವಾಸಿ ತಾಣಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಈ) ಉತ್ತರ ಕರ್ನಾಟಕ ಭಾಗದ ಪ್ರವಾಸಿ ತಾಣಗಳ ಪರಿಚಯ ಮತ್ತು ಪ್ರಚಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಹೆಬ್ಬೆಟ್ಟಿನ ಗೆರೆಗಳು ಅಳಿಸಿಹೋಗಿರುವ ಫಲಾನುಭವಿಗಳಿಗೆ ಪಡಿತರ ನಿರಾಕರಣೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧ (೬೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವೃತ್ತಿಪರತೆಯಿಂದ, ಅಂಗವಿಕಲತೆಯಿಂದ ಹಾಗೂ ವಯೋವೃದ್ಧತೆಯಿಂದ ಹೆಬ್ಬೆಟ್ಟಿನ ಗೆರೆಗಳು ಅಳಿಸಿಹೋಗಿ ಬಯೋಮೆಟ್ರಿಕ್ ಯಂತ್ರವು ಫಲಾನುಭವಿಗಳನ್ನು ಗುರುತಿಸಲು ವಿಫಲವಾಗುತ್ತಿರುವುದರಿಂದ, ಅವರಿಗೆ ಪಡಿತರ ವಿತರಣೆಯಾಗದಿರುವುದು ಹಾಗೂ ಅಂತಹವರಿಗೆ ಪಡಿತರ ಚೀಟಿ ವಿತರಣೆಯಲ್ಲೂ ವಿಳಂಬವಾಗಿ, ಅವರು ವರ್ಷಗಟ್ಟಲೇ ಸರ್ಕಾರಿ ಕಛೇರಿಗಳಿಗೆ ಅಲೆಯುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ವರ್ಷಗಟ್ಟಲೇ ಪಡಿತರ ಆಹಾರ ವಿತರಣೆಯಿಲ್ಲದೆ ಅಲೆಯುತ್ತಿರುವ ಸೌಲಭ್ಯ ವಂಚಿತರಿಗೆ ಸರ್ಕಾರವು ಏನು ಪರ್ಯಾಯ ವ್ಯವಸ್ಥೆ ಮಾಡುವುದು ; ಈ ವಿಳಂಬಕ್ಕೆ ಕಾರಣಗಳೇನು;

(ಇ) ಇದಕ್ಕೆ ಯಾರು ಹೊಣೆ; ಇದರಿಂದ ಹಲವಾರು ವರ್ಷಗಳಿಂದ ಅನ್ಯಾಯಕ್ಕೊಳಗಾದ ಬಡವರಿಗೆ ಏನು ಪರಿಹಾರ ನೀಡುವಿರಿ; ಅಂತಹವರು ಪಡಿತರ ಚೀಟಿ ಪಡೆಯಲು ಏನು ಮಾಡಬೇಕು;

(ಈ) ರಾಜ್ಯಾದ್ಯಂತ ಎಷ್ಟು ಜನರು ಈ ರೀತಿ ಸೌಲಭ್ಯ ವಂಚಿತರಾಗಿದ್ದಾರೆ? (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಹೆಣ್ಣು ಭ್ರೂಣ ಹತ್ಯೆ ಹೆಚ್ಚಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೨ (೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೆಣ್ಣು ಭ್ರೂಣ ಹತ್ಯೆ ಅವ್ಯಾಹತವಾಗಿ ನಡೆಯುತ್ತಿದ್ದು ಇದನ್ನು ತಡೆಗಟ್ಟಲು ರೂಪಿತವಾದ "ಭ್ರೂಣಲಿಂಗ ಪತ್ತೆ ತಡೆಕಾಯ್ದೆ"ಯು ಕಟ್ಟುನಿಟ್ಟಾಗಿ ಜಾರಿಯಾಗದೆ ಇರುವುದರಿಂದ ಲಿಂಗಾನುಪಾತದಲ್ಲಿ ಭಾರೀ ವ್ಯತ್ಯಾಸವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಷ್ಟ್ರೀಯ ಕೌಟುಂಬಿಕ ಆರೋಗ್ಯ ಸಮೀಕ್ಷೆ ಪ್ರಕಾರ ಗಂಡು–ಹೆಣ್ಣು ನಡುವಿನ ಲಿಂಗಾನುಪಾತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಭ್ರೂಣ ಹತ್ಯೆ ತಡೆ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಜಾರಿಗೆ ತಂದು ಲಿಂಗಾನುಪಾತ ಸರಿದೂಗಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ; ಹಾಗೂ ಈವರೆಗೆ ಎಷ್ಟು ಪ್ರಕರಣಗಳು ವರದಿಯಾಗಿದೆ; ಅವುಗಳ ವಿರುದ್ಧ ಸರ್ಕಾರ ಏನು ಕ್ರಮಕೈಗೊಂಡಿದೆ; (ಪೂರ್ಣ ಮಾಹಿತಿ ನೀಡುವುದು)

(ಈ) ಭ್ರೂಣ ಹತ್ಯೆ ಕಾಯ್ದೆ ಜಾರಿಯಲ್ಲಿದ್ದರೂ ಕೂಡಾ ಗಂಡು–ಹೆಣ್ಣು ನಡುವಿನ ಲಿಂಗಾನುಪಾತದಲ್ಲಿ ವ್ಯತ್ಯಾಸವಾಗಲು ಕಾರಣಗಳೇನು?

## ಕೊರಗ ಕಾಲೋನಿ ಅಭಿವೃದ್ಧಿ ಮತ್ತು ಹಕ್ಕುಪತ್ರ, ವಸತಿ, ಮೂಲ ಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೩ (೭೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಸಚಿವರ ಹಾಡಿ ವಾಸ್ತವ್ಯ ಸಂದರ್ಭವೂ ಸೇರಿದಂತೆ ಸರ್ಕಾರ ಕೊರಗ ಮತ್ತು ಹಾಡಿ ಜನರ ಅಭಿವೃದ್ಧಿಗೆ ಘೋಷಿಸಿರುವ ಪ್ಯಾಕೇಜ್‌ಗಳೆಷ್ಟು ; (ಘೋಷಿಸಿರುವ ಅನುದಾನ, ಬಿಡುಗಡೆಯಾದ, ಖರ್ಚಾದ ಅನುದಾನದ ವಿವರ ನೀಡುವುದು)

(ಆ) ಉಡುಪಿ–ದಕ್ಷಿಣ ಕನ್ನಡ ಜಿಲ್ಲೆಗಳು ಸೇರಿದಂತೆ ರಾಜ್ಯದ ಕೊರಗ ಜನರು ಮನೆಯಡಿಯ ಹಕ್ಕುಪತ್ರ ಮನೆ, ನೀರು, ವಿದ್ಯುತ್‌ನಂತಹ ಮೂಲ ಸೌಕರ್ಯವಿಲ್ಲದೆ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಉಡುಪಿ–ದಕ್ಷಿಣ ಕನ್ನಡ ಜಿಲ್ಲೆಗಳು ಸೇರಿದಂತೆ ಕೊರಗ ಜನಾಂಗದವರಿಗೆ ಕಳೆದ ೩ ವರ್ಷಗಳಲ್ಲಿ ವಿತರಿಸಿದ ನಿವೇಶನ ಹಕ್ಕು ಪತ್ರ, ಮನೆ ಮತ್ತು ಇನ್ನಿತರೆ ಸೌಲಭ್ಯಗಳೇನು ; (ವರ್ಷವಾರು–ಜಿಲ್ಲಾವಾರು ಮಾಹಿತಿಯೊಂದಿಗೆ, ಉಡುಪಿ–ದಕ್ಷಿಣ ಕನ್ನಡ ಜಿಲ್ಲೆಯ ಪ್ರತ್ಯೇಕ ಮಾಹಿತಿ ನೀಡುವುದು)

(ಈ) ಕೊರಗ ಕಾಲೋನಿ ಅಭಿವೃದ್ಧಿ ಸೇರಿದಂತೆ, ಹಕ್ಕುಪತ್ರ, ಮನೆ, ವಿದ್ಯುತ್, ನೀರು ಮತ್ತು ವೈದ್ಯಕೀಯ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿವೆ? (ಸಂಪೂರ್ಣ ವಿವರ ನೀಡುವುದು)

## ಸರ್ಕಾರಿ ಆಸ್ಪತ್ರೆಯಲ್ಲಿನ ವೈದ್ಯರು ಮತ್ತು ಸಿಬ್ಬಂದಿ ಕೊರತೆ ಹಾಗೂ ಮೂಲ ಸೌಕರ್ಯ ಕೊರತೆ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೪ (೭೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ತಾಲ್ಲೂಕು ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ಸ್ವಚ್ಛತೆಯೂ ಸೇರಿದಂತೆ, ಅಗತ್ಯ ಚಿಕಿತ್ಸೆ ಉಪಕರಣ, ಮೂಲ ಸೌಕರ್ಯದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ವಿವಿಧ ಸರ್ಕಾರಿ ಆಸ್ಪತ್ರೆಯಲ್ಲಿ ಕೊರತೆ ಇರುವ ತಜ್ಞ ವೈದ್ಯರು, ಸಾಮಾನ್ಯ ವೈದ್ಯರು, ಶುಶ್ರೂಷಿಕಿಯರು, ಲ್ಯಾಬ್ ಟೆಕ್ನಿಷಿಯನ್, ಫಾರ್ಮಾಸಿಸ್ಟ್ ಸೇರಿದಂತೆ ಇತರೆ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು–ಹುದ್ದೆವಾರು ವಿವರ ನೀಡುವುದು)

(ಇ) ಸರ್ಕಾರಿ ಆಸ್ಪತ್ರೆಗಳಲ್ಲಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ಅಳವಡಿಸಲಾಗಿದೆಯೇ; ಇಲ್ಲವಾದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು ;

(ಈ) ಸರ್ಕಾರಿ ಆಸ್ಪತ್ರೆಯಲ್ಲಿನ ವೈದ್ಯರು, ಸಿಬ್ಬಂದಿ ಕೊರತೆ ನಿವಾರಿಸಲು ಸ್ವಚ್ಛತೆ ಕಾಪಾಡಲು, ಅಗತ್ಯ ಉಪಕರಣಗಳು ಲಭ್ಯತೆ ಖಾತ್ರಿ ಪಡಿಸಲು ಹಾಗೂ ಆಸ್ಪತ್ರೆಯಲ್ಲಿನ ಮೂಲ ಸೌಕರ್ಯ ಉತ್ತಮಪಡಿಸಲು ಸರ್ಕಾರ ಯಾವ ಯಾವ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ಒದಗಿಸುವುದು)

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯಕ್ರಮ ಹಾಗೂ ಇಲಾಖೆಯ ವಿಳಂಬ ನೀತಿ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೫ (೭೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಾವುವು ;

(ಆ) ಇಲಾಖೆಯ ಯೋಜನೆಗಳಿಗೆ ಕಳೆದ ೨ ವರ್ಷಗಳಲ್ಲಿ ಕಾಯ್ದಿರಿಸಿದ, ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನ ಎಷ್ಟು ; (ವರ್ಷಾವಾರು–ಯೋಜನೆವಾರು ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕಾರ್ಯಕ್ರಮ ಆಯೋಜನೆಗಳಿಗೆ, ಸಂಘ–ಸಂಸ್ಥೆಗಳಿಗೆ ನೀಡಿದ ಅನುದಾನ ಎಷ್ಟು ; (ಸಂಸ್ಥೆಗಳ ವಿವರ ನೀಡುವುದು)

(ಈ) ಕಳೆದ ೨ ವರ್ಷಗಳಲ್ಲಿ ಸಂಗೀತ ಪರಿಕರ ವಿತರಣೆ ಮಾಡಿದ ವೈಯಕ್ತಿಕ ಫಲಾನುಭವಿಗಳ ಸಂಖ್ಯೆ ಎಷ್ಟು ; ಮತ್ತು ಸಂಘ – ಸಂಸ್ಥೆಗಳ ಸಂಖ್ಯೆ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಉ) ಇಲಾಖೆಯ ವಿಳಂಬ, ಕಡತ ವಿಲೇವಾರಿ, ನಿಷ್ಕ್ರೀಯ ಆಡಳಿತ ಸೇರಿದಂತೆ ಕಾರ್ಯಕ್ರಮ ಆಯೋಜನೆ, ಸಂಗೀತ ಪರಿಕರಗಳ ವಿತರಣೆಯಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವುದು ನಿಜವೆ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ಮಿಂಟೋ ಆಸ್ಪತ್ರೆಯಲ್ಲಿ "ಎಂಡೋ ಲೇಸರ್ ಯಂತ್ರ" ಹಾಳಾಗಿ ರೋಗಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬ (೭೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರತಿಷ್ಠಿತ ಮಿಂಟೋ ಕಣ್ಣಿನ ಆಸ್ಪತ್ರೆಯಲ್ಲಿ "ಎಂಡೋ ಲೇಸರ್ ಯಂತ್ರ'' ಕೆಟ್ಟು ಹೋಗಿದ್ದು, ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) "ಎಂಡೋ ಲೇಸರ್ ಯಂತ್ರ" ವಿಲ್ಲದೇ ಅಸ್ಥಿತ್ವದಲ್ಲಿದ್ದ ಹಳೇ ಪದ್ಧತಿ ಮೂಲಕವೇ ಚಿಕಿತ್ಸೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಆಸ್ಪತ್ರೆಯ ರೇಟಿನಾ ವಿಭಾಗದಲ್ಲಿ ಅಗತ್ಯವಿರುವ ಯಂತ್ರ ಖರೀದಿಗೆ ವಿಳಂಬ ನೀತಿ ಅನುಸರಿಸಲು ಕಾರಣಗಳೇನು ;

(ಈ) ರೋಗಿಗಳ ಹಿತ ಕಾಪಾಡುವ ನಿಟ್ಟಿನಲ್ಲಿ ತುರ್ತಾಗಿ "ಎಂಡೋ ಲೇಸರ್ ಯಂತ್ರ" ಖರೀದಿಸಿ ಆಸ್ಪತ್ರೆಯಲ್ಲಿ ಉತ್ತಮ ಚಿಕಿತ್ಸೆ ನೀಡುವಲ್ಲಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ನೀಡುವುದು)

## ತುರುವೇಕೆರೆ ಆರೋಗ್ಯ ಕೇಂದ್ರಕ್ಕೆ ಡಯಾಲಿಸೀಸ್ ಕೇಂದ್ರ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೭ (೪೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ತಾಲ್ಲೂಕಿನ ಜನತೆಗೆ ಇತ್ತೀಚಿನ ದಿನಗಳಲ್ಲಿ ಆರೋಗ್ಯ ಕೇಂದ್ರದಲ್ಲಿ ಡಯಾಲಿಸೀಸ್ ಕೇಂದ್ರ ಇಲ್ಲದಿರುವುದರಿಂದ ಬಹಳ ಸಾವು ನೋವು ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ವರ್ಷದಲ್ಲಿ ತುರುವೇಕರೆ ಆರೋಗ್ಯ ಕೇಂದ್ರದಲ್ಲಿ ಡಯಾಲಿಸೀಸ್ ಕೇಂದ್ರ ತೆಗೆದು ತಾಲ್ಲೂಕಿನ ಜನರಿಗೆ ಅನುಕೂಲ ಮಾಡಿಕೊಡಲಾಗುವುದೇ;

(ಇ) ಹಾಗಿದ್ದಲ್ಲಿ, ಯಾವಾಗ ಮಾಡಲಾಗುವುದು ?

## ಬೆಳಗಾವಿ ವಿಭಾಗದಲ್ಲಿರುವ ನ್ಯಾಯಬೆಲೆ ಅಂಗಡಿಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೮ (೪೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ವಿಭಾಗದ ಎಲ್ಲಾ ಜಿಲ್ಲೆಗಳಲ್ಲಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ಇತ್ತೀಚಿನ ದಿನಗಳಲ್ಲಿ ಆಹಾರ ಸಾಮಾಗ್ರಿಗಳನ್ನು ವಾರದಲ್ಲಿ ಕೇವಲ ಒಂದೆರಡು ದಿನ ಮಾತ್ರ ನೀಡುತ್ತಿರುವುದಾಗಿ ದೂರುಗಳು ಬಂದಿದೆಯೇ; (ವಿಭಾಗವಾರು ವಿವರ ನೀಡುವುದು)

(ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಈ) ಈ ತೊಂದರೆಯನ್ನು ಯಾವಾಗ ಸರಿಪಡಿಸಲಾಗುವುದು ?

## ಬೆಳಗಾವಿ ವಿಭಾಗದ ಬಡ ನೇಕಾರರಿಗೆ ಮೂಲಭೂತ ಸೌಲಭ್ಯದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೯ (೪೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ವಿಭಾಗದಲ್ಲಿ ಅತಿ ಹೆಚ್ಚು ನೇಕಾರರು ನೇಕಾರಿಕೆ ಮಾಡುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಲವಾರು ವರ್ಷಗಳಿಂದ ಈ ಭಾಗದ ನೇಕಾರರು ಯೋಜನೆ ಹಾಗೂ ಹೊಸ ತಂತ್ರಜ್ಞಾನ ಮೂಲಕ ನೇಕಾರಿಕೆಗೆ ಬೇಡಿಕೆ ಸಲ್ಲಿಸಿದ್ದು, ಇದುವರೆಗೆ ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ನೇಕಾರ ನಗರ ಎಂದು ಹೇಳುತ್ತಿರುವ ಸುವರ್ಣಸೌಧದ ಮೂಲಕ ಈ ಅಧಿವೇಶನದಲ್ಲಿ ಹೊಸ ಯೋಜನೆ ಮುಖಾಂತರ ನೇಕಾರರಿಗೆ ಉತ್ತಮ ಅವಕಾಶವನ್ನು ಸರ್ಕಾರ ಕಲ್ಪಿಸುವುದೇ ?

## ಗೊಟ್ಟೀಕೆರೆ ಗ್ರಾಮವನ್ನು ಪ್ರವಾಸೋದ್ಯಮಕ್ಕೆ ಸೇರಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೪೦ (೫೦) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ತಾಲ್ಲೂಕು, ಮುನಿಯೂರು ಗ್ರಾಮ ಪಂಚಾಯ್ತಿ, ಗೊಟ್ಟೀಕೆರೆ ಗ್ರಾಮ ಇತ್ತೀಚೆಗೆ ಧಾರ್ಮಿಕ ಕ್ಷೇತ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇತ್ತೀಚಿನ ದಿನಗಳಲ್ಲಿ ದಿನಂಪ್ರತಿ ಸಾವಿರಾರು ಭಕ್ತರು ವೆಂಕಟೇಶ್ವರ ದರ್ಶನಕ್ಕೆ ಬರುತ್ತಿದ್ದು, ಮೂಲಭೂತ ಸೌಕರ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಗೊಟ್ಟೀಕೆರೆ ಗ್ರಾಮವನ್ನು ಪ್ರವಾಸೋದ್ಯಮ ಕ್ಷೇತ್ರಕ್ಕೆ ಸೇರಿಸಲು ಪರಿಶೀಲಿಸಲಾಗುವುದೇ ?

## ತುಮಕೂರು ಜಿಲ್ಲಾ ಆಸ್ಪತ್ರೆಯಲ್ಲಿ ಸೌಲಭ್ಯ ಕೊರತೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೪೧ (೫೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲಾ ಆಸ್ಪತ್ರೆಯಲ್ಲಿರುವ ಸೌಕರ್ಯಗಳೇನು ;

(ಆ) ವೈದ್ಯರು ಹಾಗೂ ಸಿಬ್ಬಂದಿಗಳ ಕೊರತೆಯಿಂದ ಹಲವಾರು ತಿಂಗಳಿಂದ ರೋಗಿಗಳಿಗೆ ಉತ್ತಮ ಚಿಕಿತ್ಸೆ ಸಿಗದಿರುವ ಬಗ್ಗೆ ದೂರು ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಉತ್ತಮ ಚಿಕಿತ್ಸೆ ನೀಡಲು ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಚಿಕಿತ್ಸೆ ಸಿಗದೇ ಮರಣ ಹೊಂದಿರುವ ರೋಗಿಗಳ ಸಂಖ್ಯೆ ಎಷ್ಟು ?

## ಅಡುಗೆ ಅನಿಲ ಸಬ್ಸಿಡಿಯನ್ನು ಪಡೆಯುತ್ತಿರುವ ಫಲಾನುಭವಿಗಳ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೨ (೭೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಡುಗೆ ಅನಿಲ ಸಬ್ಸಿಡಿಯನ್ನು ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; ಹಾಗೂ ಸಬ್ಸಿಡಿಯ ಹಣವೆಷ್ಟು; ಹಾಗೂ ಗ್ರಾಮ ಸಬ್ಸಿಡಿಯನ್ನು ಸರ್ಕಾರಕ್ಕೆ ಹಿಂದಿರುಗಿಸಿರುವವರ ಸಂಖ್ಯೆ, ಸಬ್ಸಿಡಿಯ ಹಣವೆಷ್ಟು; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ಕೇಂದ್ರ ಸರ್ಕಾರವು ಅಡುಗೆ ಅನಿಲ ಸಂಪರ್ಕವನ್ನು ಉಚಿತವಾಗಿ ನೀಡುವ ವ್ಯವಸ್ಥೆಯನ್ನು ಕಲ್ಪಸಿದೆಯೇ ; ಇದರಿಂದ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದ ಕೆಲವು ಗ್ಯಾಸ್ ಏಜೆನ್ಸಿಯುವರು ಗ್ರಾಹಕರಿಂದ ₹.2,500/-ರಿಂದ ₹.5,000/-ಗಳವರೆಗೆ ಹಣ ವಸೂಲಿ ಮಾಡಿ ಅಡುಗೆ ಅನಿಲ ಸಂಪರ್ಕ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ರೀತಿ ಅಮಾಯಕರಿಂದ ಹಣ ಪಡೆದು ಅಡುಗೆ ಅನಿಲ ಸಂಪರ್ಕ ನೀಡಿರುವ ಗ್ಯಾಸ್ ಏಜೆನ್ಸಿಗಳನ್ನು ಪತ್ತೆ ಹಚ್ಚಿ ಏನು ಕ್ರಮ ಕೈಗೊಳ್ಳಲಾಗಿದೆ? (ಮಾಹಿತಿ ನೀಡುವುದು)

## ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಕೇಂದ್ರ ತೆರೆಯುವ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೩ (೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಕೇಂದ್ರ ತೆರೆಯಲಾಗಿದೆ; ಸುಸ್ಥಿತಿಯಲ್ಲಿರುವ ಮತ್ತು ದುರಸ್ಥಿಯಲ್ಲಿರುವ ಯಂತ್ರಗಳ ಸಂಖ್ಯೆ ಎಷ್ಟು; ಇವುಗಳ ದುರಸ್ಥಿಗೆ ಏನು ಕ್ರಮ ವಹಿಸಲಾಗಿದೆ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಡಯಾಲಿಸಿಸ್ ಯಂತ್ರಗಳನ್ನು ಖರೀದಿಸಲಾಗಿದೆ, ಟೆಂಡರ್ ಮೂಲಕ ಖರೀದಿಸಿದ್ದರೆ ಟೆಂಡರ್‌ನಲ್ಲಿ ಭಾಗವಹಿಸಿದ ಕಂಪನಿಗಳ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಡಯಾಲಿಸಿಸ್ ಯಂತ್ರಗಳಿಗೆ ಬಳಸುವ ರಾಸಾಯನಿಕ ಸಾಮಗ್ರಿಗಳು ಜಿಲ್ಲಾ/ತಾಲ್ಲೂಕು/ಸ್ಥಳೀಯವಾಗಿ ಲಭ್ಯವಿದೆಯೇ ;

(ಈ) ಇಲ್ಲದಿದ್ದಲ್ಲಿ, ಯಾವ ರೀತಿ ಖರೀದಿಸಲಾಗುತ್ತದೆ ಮತ್ತು ಎಷ್ಟು ಪ್ರಮಾಣದಲ್ಲಿ ಖರೀದಿಸಿ ಸರಬರಾಜು ಮಾಡಲಾಗಿದೆ? (ಸರಬರಾಜುದಾರರ ವಿವರದೊಂದಿಗೆ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಪ್ರವಾಸಿ ಟ್ಯಾಕ್ಸಿ ವಿತರಿಸಲು ಸಹಾಯಧನ ಮಂಜೂರು ಮಾಡಿಸುವ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪ (೭೯) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಹಾಗೂ ಇತರೆ ಹಿಂದುಳಿದ ವರ್ಗಗಳ ಎಷ್ಟು ಫಲಾನುಭವಿಗಳಿಗೆ ಪ್ರವಾಸಿ ಟ್ಯಾಕ್ಸಿ ವಿತರಿಸಲು ಸಹಾಯಧನ ಮಂಜೂರು ಮಾಡಲಾಗಿದೆ ; (ವರ್ಷವಾರು, ವಿಧಾನಸಭಾ ಕ್ಷೇತ್ರವಾರು, ಫಲಾನುಭವಿಗಳ ಹೆಸರು, ವಿಳಾಸ ಸಹಿತ ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸಲಾಗಿರುವ ಮಾನದಂಡಗಳೇನು ? (ಸಂಪೂರ್ಣ ವಿವರಗಳನ್ನು ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ಅನುದಾನ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೫ (೮೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ಕಳೆದ ಮೂರು ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಆಯವ್ಯಯದಲ್ಲಿ ಮೀಸಲಿಟ್ಟ ಅನುದಾನವೆಷ್ಟು; ಖರ್ಚು

ಮಾಡಲಾದ ಹಣವೆಷ್ಟು; ಖರ್ಚಾಗದೆ ಉಳಿದ ಹಣವೆಷ್ಟು; ಖರ್ಚಾಗದಿರಲು ಕಾರಣಗಳೇನು; (ವರ್ಷವಾರು ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಆ) ಸರ್ಕಾರವು ಮೀಸಲಿಟ್ಟ ಅನುದಾನದಲ್ಲಿ ರಾಜ್ಯದಲ್ಲಿ ಅನುಷ್ಠಾನಗೊಳಿಸಲಾದ ವಿವಿಧ ಯೋಜನೆಗಳಾವುವು ;

(ಇ) ಈ ಯೋಜನೆಗಳು ಪ್ರಸ್ತುತ ಯಾವ ಹಂತದಲ್ಲಿವೆ? (ವರ್ಷವಾರು ಯೋಜನೆಗಳವಾರು ಸಂಪೂರ್ಣ ಮಾಹಿತಿ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯ ಅಂಗನವಾಡಿ ಕಟ್ಟಡ ನಿರ್ಮಾಣ ಬಗ್ಗೆ

**ಶ್ರೀಮತಿ ಮೊಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೪೬ (೮೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯ ಅಂಗನವಾಡಿ ಕಟ್ಟಡ ನಿರ್ಮಾಣ ಕಾಮಗಾರಿಗೆ, ಜಿಲ್ಲಾಡಳಿತಕ್ಕೆ ನಿವೇಶನ ಕುರಿತು ಪ್ರಸ್ತಾವ ಬಂದಿದೆಯೇ ;

(ಆ) ಬಂದಿದ್ದರೆ, ಈ ನಿವೇಶನಗಳನ್ನು ಯಾವಾಗ ಮಂಜೂರು ಮಾಡಲಾಗುವುದು ;

(ಇ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಎಷ್ಟು ಅಂಗನವಾಡಿಗಳು ಖಾಸಗಿ ಕಟ್ಟಡದಲ್ಲಿ ನಡೆಯುತ್ತಿವೆ; ಖಾಸಗಿ ಕಟ್ಟಡಗಳಿಗೆ ನೀಡುತ್ತಿರುವ ಬಾಡಿಗೆ ಮೊತ್ತ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೭ (೪೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಒಟ್ಟಾರೆ ಮಂಜೂರಾದ ವೈದ್ಯಕೀಯ, ಅರೆ ವೈದ್ಯಕೀಯ ಮತ್ತು ಶುಶ್ರೂಕ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಇ) ಯಾವ ವರ್ಷದಲ್ಲಿ ಎಷ್ಟು ಜನಸಂಖ್ಯೆಯ ಆಧಾರದ ಮೇಲೆ ಈ ಹುದ್ದೆಗಳನ್ನು ಮಂಜೂರು ಮಾಡಲಾಗಿತ್ತು ;

(ಈ) ಪ್ರಸ್ತುತ ಖಾಲಿಯಿರುವ, ರಜೆ ಮತ್ತು ಗೈರುಹಾಜರಿಯಲ್ಲಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಉ) ಖಾಲಿಯಿರುವ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ಅವ್ಯವಸ್ಥೆಯ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೮ (೪೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯ ಹಲವು ವಸತಿ ನಿಲಯಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಈ ರೀತಿ ಶಿಥಿಲಾವಸ್ಥೆಯಲ್ಲಿರುವ ವಸತಿ ನಿಲಯಗಳ ಕಟ್ಟಡಗಳೆಷ್ಟು ;

(ಇ) ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳೆಷ್ಟು ;

(ಈ) ೨೦೧೩ ರಿಂದ ೨೦೧೬ರವರೆಗೆ ಎಷ್ಟು ವಸತಿ ನಿಲಯಗಳ ಕಟ್ಟಡಗಳನ್ನು ನಿರ್ಮಿಸಲಾಗಿದೆ ;

(ಉ) ಹೊಸದಾಗಿ ನಿರ್ಮಿಸಲು ಉದ್ದೇಶಿಸಲಾಗಿರುವ ಕಟ್ಟಡಗಳ ಸಂಖ್ಯೆ ಎಷ್ಟು ಹಾಗೂ ಅವುಗಳನ್ನು ಯಾವಾಗ ನಿರ್ಮಿಸಲಾಗುವುದು ?

## ಅಂಗನವಾಡಿ ಮಕ್ಕಳ ಆಹಾರ ಪೂರೈಕೆಯಲ್ಲಿ ಅವ್ಯವಹಾರ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೯ (೪೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಂಗನವಾಡಿ ಮಕ್ಕಳ ಆಹಾರ ಪೂರೈಕೆಯಲ್ಲಿ ಅವ್ಯವಹಾರ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ತಪ್ಪಿತಸ್ಥರ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಮುಂದೆ ಈ ರೀತಿ ಅವ್ಯವಹಾರ ಆಗದಂತೆ ತಡೆಗಟ್ಟಲು ಸರ್ಕಾರ ಯಾವ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಿದೆ ?

## ಅಂತರ್ಜಾತಿ ವಿವಾಹಕ್ಕೆ ನೀಡಲಾಗುವ ಪ್ರೋತ್ಸಾಹ ಧನದ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೦ (೪೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆಯವತಿಯಿಂದ ನೀಡಲಾಗುತ್ತಿರುವ ಅಂತರ್ಜಾತಿ ವಿವಾಹ ಪ್ರೋತ್ಸಾಹ ಧನಕ್ಕೆ ಸಂಬಂಧಿಸಿದಂತೆ ಇಲ್ಲಿಯವರೆವಿಗೂ ಎಷ್ಟು ಅರ್ಜಿಗಳು ಬಂದಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಆ ಪೈಕಿ ಎಷ್ಟು ಫಲಾನುಭವಿ ದಂಪತಿಗಳಿಗೆ ಪ್ರೋತ್ಸಾಹ ಧನ ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಬೆಂಗಳೂರು ಜಿಲ್ಲೆಯ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧ (೪೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಜಿಲ್ಲೆಯ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಆಹಾರ ಸಾಮಗ್ರಿಗಳನ್ನು ಸರಬರಾಜು ಮಾಡಲು ಗುತ್ತಿಗೆಯನ್ನು ಯಾವ ಕಂಪನಿಗೆ ನೀಡಲಾಗಿದೆ; ಎಷ್ಟು ವರ್ಷಗಳಿಂದ ಈ ಕಂಪನಿ ಸರಬರಾಜು ಮಾಡುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಬೆಂಗಳೂರು ಜಿಲ್ಲೆ ವ್ಯಾಪ್ತಿಯಲ್ಲಿ ಶಿಥಿಲಾವಸ್ಥೆಗೊಂಡಿರುವ ಅಂಗನವಾಡಿ ಕೇಂದ್ರಗಳ ಕುರಿತು ಇಲಾಖೆ ವತಿಯಿಂದ ಪರಿಶೀಲನೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಶಿಥಿಲಾವಸ್ಥೆಯಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಇವುಗಳಿಗೆ ಸಂಬಂಧಿಸಿದಂತೆ ಇಲಾಖೆ ವತಿಯಿಂದ ಏನು ಕ್ರಮ ಕೈಗೊಳ್ಳಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅಂಗನವಾಡಿ ಕೇಂದ್ರಗಳಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಇಲ್ಲಿಯವರೆಗೂ ಎಷ್ಟು ದೂರುಗಳು ಬಂದಿವೆ; ಬಂದಿದ್ದಲ್ಲಿ, ಸಂಬಂಧಪಟ್ಟವರ ವಿರುದ್ಧ ಏನು ಕ್ರಮ ಜರುಗಿಸಲಾಗಿದೆ ?

## ಬೆಂಗಳೂರು ಜಿಲ್ಲಾ ವ್ಯಾಪ್ತಿಯ ಸರ್ಕಾರಿ ಆಸ್ಪತ್ರೆಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೨ (೫೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಜಿಲ್ಲಾ ವ್ಯಾಪ್ತಿಯ ಸರ್ಕಾರಿ ಆಸ್ಪತ್ರೆಗಳಲ್ಲಿ ಬಡರೋಗಿಗಳಿಂದ ಚಿಕಿತ್ಸೆಗಾಗಿ ಅಲ್ಲಿನ ಸಿಬ್ಬಂದಿ ವರ್ಗದವರು ಹಣ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೂ ಈ ಕುರಿತು ಎಷ್ಟು ದೂರುಗಳು ದಾಖಲಾಗಿವೆ; ಮತ್ತು ಏನು ಕ್ರಮ ಕೈಗೊಳ್ಳಲಾಗಿದೆ ;

(ಆ) ಸರ್ಕಾರಿ ಆಸ್ಪತ್ರೆಗಳಲ್ಲಿ ಉತ್ತಮವಾದ ಚಿಕಿತ್ಸೆ ದೊರೆಯದ ರೋಗಿಗಳು ಖಾಸಗಿ ಆಸ್ಪತ್ರೆಗಳ ಮೊರೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ವಸತಿ ಶಾಲೆ ಹಾಸ್ಟೆಲ್ ಆಹಾರ ಖರೀದಿಯಲ್ಲಿ ಭಾರಿ ಅಕ್ರಮ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೩ (೧೦೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಮತ್ತು ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಇಲಾಖೆ ವ್ಯಾಪ್ತಿಯ ವಸತಿ ಶಾಲೆ, ವಸತಿ ನಿಲಯಗಳಿಗೆ, ಹಾಸ್ಟೆಲ್ ಆಹಾರ, ಕಂಪ್ಯೂಟರ್ ಹಾಗೂ ಪೀಠೋಪಕರಣಗಳ ಖರೀದಿಯಲ್ಲಿ ಭಾರಿ ಅಕ್ರಮ ನಡೆದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ವಿಚಾರವಾಗಿ ಲೋಕಾಯುಕ್ತ ಅಥವಾ ಉನ್ನತ ಮಟ್ಟದ ತನಿಖೆಗೆ ಶಿಫಾರಸ್ಸು ಮಾಡಲಾಗಿದೆಯೇ; ಮಾಡಿದ್ದಲ್ಲಿ, ಏನು ಕ್ರಮ ವಹಿಸಲಾಗಿದೆ; ತನಿಖೆ ಯಾವ ಹಂತದಲ್ಲಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಗೌವರ್ನಿಂಗ್ ಕೌನ್ಸಿಲ್ ಮತ್ತು ಸಕ್ಷಮ ಪ್ರಾಧಿಕಾರಗಳಲ್ಲಿ ಟೆಂಡರ್ ಕುರಿತಂತೆ ಯಾವ ವಿಷಯವನ್ನೂ ಮಂಡಿಸದೆ ಲೋಪ ಎಸಗಿರುವ ವಿಚಾರವಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಲೋಪವೆಸಗಿರುವ ಅಧಿಕಾರಿಗಳ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ವಸತಿ ಶಿಕ್ಷಣ ಸಂಸ್ಥೆಗಳ ಸಂಘದಲ್ಲಿ ಜವಾಬ್ದಾರಿಯುತ ಅಧಿಕಾರಿಗಳು ಇಲ್ಲದೇ ಇರುವ ವಿಚಾರವಾಗಿ ಏನು ಕ್ರಮ ವಹಿಸಲಾಗಿದೆ; ಈ ರೀತಿಯ ಹಗರಣಗಳನ್ನು ತಡೆಗಟ್ಟಲು ಟೆಂಡರ್ ಹಾಗೂ ಗುತ್ತಿಗೆ ಪ್ರಕ್ರಿಯೆಗಳನ್ನು ಆನ್‌ಲೈನ್ ಮೂಲಕ ಪಾರದರ್ಶಕವಾಗಿ ಮಾಡುವ ವಿಚಾರ ಸರ್ಕಾರದ ಮುಂದೆ ಇದೆಯೇ ? (ವಿವರ ನೀಡುವುದು)

## ಅಂಗನವಾಡಿಯ ಮೂಲಭೂತ ಅವಶ್ಯಕತೆ ಮತ್ತು ಕಾರ್ಯಕರ್ತೆಯರ ಸೌಲಭ್ಯದ ಬಗ್ಗೆ

**ಶ್ರೀ ಕೆ. ಪ್ರತಾಪ್‌ಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೪ (೧೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕ್ಷೇತ್ರಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು) ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು ಮತ್ತು ಶೌಚಾಲಯದ ಸೌಲಭ್ಯವಿಲ್ಲದಿರುವ ಅಂಗನವಾಡಿ ಸಂಖ್ಯೆ ಎಷ್ಟು ; ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಹಾಕಿಕೊಂಡ ಕಾಲಮಿತಿ ಏನು ;

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳ ಸಂಖ್ಯೆ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಸಿಬ್ಬಂದಿಗಳಿಗೆ ವೈದ್ಯಕೀಯ ವೆಚ್ಚವನ್ನು ಸರ್ಕಾರದಿಂದ ಭರಿಸಲು ಅವಕಾಶವಿದೆಯೇ; ಅವಕಾಶವಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಸಲ್ಲಿಸಲಾದ ಪ್ರಸ್ತಾವನೆಗಳ ಸಂಖ್ಯೆ ಎಷ್ಟು; ಹಾಗೂ ಬಿಡುಗಡೆಗೆ ಬಾಕಿ ಇರುವ ಮೊತ್ತವೆಷ್ಟು; ಹಣ ಬಿಡುಗಡೆಗೆ ಇರುವ ಕಾಲಮಿತಿಯ ಮಾಹಿತಿಯನ್ನು ನೀಡುವುದು ;

(ಈ) ಅಂಗನವಾಡಿ ಸಿಬ್ಬಂದಿಯವರು ಆಕಸ್ಮಿಕ ಮರಣ ಹೊಂದಿದ್ದಲ್ಲಿ, ನೀಡಲಾಗುವ ಪರಿಹಾರ ಸೌಲಭ್ಯಗಳಾವುವು; ಕಳೆದ ಮೂರು ವರ್ಷಗಳಿಂದ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಲ್ಲಿಕೆಯಾದ ಪ್ರಕರಣಗಳ ಸಂಖ್ಯೆ ಮತ್ತು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ಈ ಪ್ರಕರಣಗಳ ಪರಿಹಾರ ಇತ್ಯರ್ಥಕ್ಕೆ ಇರುವ ಕಾಲಮಿತಿಯೆಷ್ಟು ?

## “೧೦೮” ವಾಹನ ಸೇವೆ ಸೌಲಭ್ಯಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

*** (೧೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಪ್ರದೇಶದಲ್ಲಿ ಅವಿದ್ಯಾವಂತ ಮುಗ್ಧ ಬಡಜನರು ತೀವ್ರ ಖಾಯಿಲೆಯಿಂದಾಗಿ ಚಿಕಿತ್ಸೆಗಾಗಿ ಸರ್ಕಾರಿ ಸೌಲಭ್ಯದ "೧೦೮" ವಾಹನದಲ್ಲಿ ಸಾಗಾಟ ಮಾಡುವ ದಾರಿಯ ಮಧ್ಯದಲ್ಲಿ ರೋಗಿ ಮರಣಹೊಂದಿದರೆ ಮರಣ ಪ್ರಮಾಣ ಪತ್ರ ವಿತರಿಸುವ ಪ್ರಾಧಿಕಾರ ಯಾವುದು; ಇದರ ಬಗ್ಗೆ ಇರುವ ಸರ್ಕಾರಿ ಸುತ್ತೋಲೆಯ ಪ್ರತಿ ಒದಗಿಸುವುದು ;

(ಆ) ರೋಗಿಯ ಕಡೆಯಿಂದ "೧೦೮" ವಾಹನದ ಬಗ್ಗೆ ಮತ್ತು ಸೌಲಭ್ಯಗಳ ಬಗ್ಗೆ ಇಲಾಖೆಗೆ ದೂರುಗಳು ಬಂದಿವೆಯೇ; (ತಾಲ್ಲೂಕುವಾರು ವಿವರ ನೀಡುವುದು)

(ಇ) "೧೦೮" ವಾಹನ ಚಾಲಕರಿಗೆ ಸೇವೆ ಮತ್ತು ಸೌಲಭ್ಯ ಮತ್ತು ನಡವಳಿಕೆಯ ಬಗ್ಗೆ ಸುತ್ತೋಲೆ ನೀಡಲಾಗಿದೆಯೇ? (ಪ್ರತಿ ಒದಗಿಸುವುದು)

## ಉಡುಪಿ ಜಿಲ್ಲೆ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಮಂಜೂರಾದ ಹುದ್ದೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೬ (೧೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಮಂಜೂರಾತಿಯಾದ ಹುದ್ದೆಗಳೆಷ್ಟು; ಇದರಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು, ಸದರಿ ಹುದ್ದೆಗಳಿಗೆ ಆಲೋಪತಿ ವೈದ್ಯರ ಬದಲು ಆಯುರ್ವೇದ ಪದವೀಧರ ವೈದ್ಯಾಧಿಕಾರಿಗಳನ್ನು ನೇಮಕ ಮಾಡಲಾಗಿದೆಯೇ; ನೇಮಕಾತಿ ಮಾಡಿದ್ದಲ್ಲಿ, ನೇಮಕಾತಿ ಆದೇಶದ ಪ್ರತಿ ನೀಡುವುದು ;

(ಆ) ಆಯುರ್ವೇದ ಪದವೀಧರ ವೈದ್ಯಾಧಿಕಾರಿಗಳನ್ನು ಹೊಂದಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸರ್ಕಾರದಿಂದ ಆಯುರ್ವೇದ ಔಷಧಗಳನ್ನು ನೀಡಲಾಗುವುದೇ ;

(ಇ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಆಯುರ್ವೇದಿಕ್ ಪದವೀಧರರ ವೈದ್ಯರುಗಳ ಸಂಖ್ಯೆ ಎಷ್ಟು ; ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಯಾವುವು ?

## ಎಂಡೋಸಲ್ಫಾನ್ ಪೀಡಿತ ವಿಕಲಚೇತನರ ಬಗ್ಗೆ

**ಶ್ರೀ ಕೆ. ಪ್ರತಾಪ್‌ಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೭ (೧೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಂಡೋಸಲ್ಫಾನ್ ಪೀಡಿತ ವಿಕಲಚೇತನರ ಸಂಖ್ಯೆ ಎಷ್ಟು; (ಗ್ರಾಮಪಂಚಾಯತ್‌ವಾರು ವಿವರ ನೀಡುವುದು)

(ಆ) ಎಂಡೋಸಲ್ಫಾನ್ ಪೀಡಿತ ವಿಕಲಚೇತನರಿಗೆ ಇಲಾಖೆಯಿಂದ ಒದಗಿಸುವ ಸೌಲಭ್ಯಗಳಾವುವು; ಇವರ ಪುನರ್ವಸತಿಯ ಬಗ್ಗೆ ಇಲಾಖೆಯಿಂದ ಕೈಗೊಂಡ ಕಾರ್ಯಕ್ರಮಗಳಾವುವು ;

(ಇ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಸರ್ಕಾರಿ ಮತ್ತು ಖಾಸಗಿ ಪುನರ್ವಸತಿ ಕೇಂದ್ರಗಳಾವುವು; ಖಾಸಗಿ ಪುನರ್ವಸತಿ ಕೇಂದ್ರಕ್ಕೆ ಸರ್ಕಾರದಿಂದ ಒದಗಿಸುವ ಸೌಲಭ್ಯಗಳಾವುವು; ಈ ಬಗ್ಗೆ ಮಾರ್ಗಸೂಚಿ ಮತ್ತು ಸುತ್ತೋಲೆಗಳ ಪ್ರತಿ ಒದಗಿಸುವುದು;

(ಈ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಎಂಡೋಸಲ್ಫಾನ್ ಪೀಡಿತರಿಗೆ ಕಳೆದ ೩ ತಿಂಗಳಿಂದ ಮಾಶಾಸನ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳಾವುವು ?

## ಮಹಿಳಾ ಆಯೋಗಕ್ಕೆ ಬಂದಿರುವ ದೂರುಗಳ ಇತ್ಯರ್ಥವನ್ನು ತ್ವರಿತಗೊಳಿಸುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೫೮ (೦೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಮಹಿಳಾ ಆಯೋಗಕ್ಕೆ ಬಂದಿರುವ ದೂರುಗಳ ಸಂಖ್ಯೆ ಎಷ್ಟು: ಅವುಗಳಲ್ಲಿ ಎಷ್ಟು ದೂರುಗಳನ್ನು ಇತ್ಯರ್ಥಪಡಿಸಲಾಗಿದೆ: ಇನ್ನೂ ಬಾಕಿ ಉಳಿದಿರುವ ದೂರುಗಳ ಸಂಖ್ಯೆ ಎಷ್ಟು; (ಶೇಕಡಾವಾರು ವಿವರ ನೀಡುವುದು)

(ಆ) ದೂರುಗಳನ್ನು ತ್ವರಿತಗತಿಯಲ್ಲಿ ಇತ್ಯರ್ಥ ಪಡಿಸಲು ಆಯೋಗಕ್ಕೆ ಅಗತ್ಯವಿರುವ ಅವಶ್ಯಕತೆಗಳೇನು ;

(ಇ) ಈ ಸಂಬಂಧ ಸರ್ಕಾರಕ್ಕೆ ಪ್ರಸ್ತಾಪ ಸಲ್ಲಿಸಲಾಗಿದೆಯೇ; ಸಲ್ಲಿಸಲಾಗಿದ್ದಲ್ಲಿ, ಸರ್ಕಾರದಿಂದ ಬಂದಿರುವ ಪ್ರತ್ಯುತ್ತರವೇನು ;

(ಈ) ಈ ಸಂಬಂಧ ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ ?

## ವೈದ್ಯ ಮತ್ತು ಖಾಸಗಿ ದಂತ ವೈದ್ಯಕೀಯ ಕಾಲೇಜುಗಳ ಶುಲ್ಕದಲ್ಲಿ ಹೆಚ್ಚಳ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೫೯ (೦೪) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವೈದ್ಯ ಮತ್ತು ದಂತ ವೈದ್ಯಕೀಯ ಶಿಕ್ಷಣ ಶುಲ್ಕವನ್ನು ಸರ್ಕಾರಿ ಕಾಮೆಡ್–ಕೆ ಮತ್ತು ಇತರೆ ಖಾಸಗಿ ಕಾಲೇಜುಗಳಲ್ಲಿ ಹೆಚ್ಚಳ ಮಾಡಿರುವುದು ನಿಜವೇ ; ಕಳೆದ ವರ್ಷ ಮತ್ತು ಪ್ರಸಕ್ತ ವರ್ಷದ ಶುಲ್ಕದ ವ್ಯತ್ಯಾಸದ ವಿವರ ನೀಡುವುದು ;

(ಆ) ಸರ್ಕಾರಿ ಕಾಮೆಡ್–ಕೆ ಮತ್ತು ಇತರೆ ಖಾಸಗಿ ಕಾಲೇಜುಗಳಲ್ಲಿ ಒಂದು ವರ್ಷದ Internship ನಡೆಸುವಾಗ ನೀಡಲಾಗುವ stipend (ವೇತನ) ವಿವರವನ್ನು ನೀಡುವುದು ?

## ಸ್ತ್ರೀ ಸ್ವ–ಸಹಾಯ ಸಂಘಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦ (೯೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಇರುವ ಸ್ತ್ರೀ ಸ್ವ–ಸಹಾಯ ಸಂಘಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯಿತಿವಾರು ಸಂಪೂರ್ಣ ವಿವರ ನೀಡುವುದು)

(ಆ) ಇವುಗಳಿಗೆ ಸರ್ಕಾರದಿಂದ ದೊರೆಯಬಹುದಾದ ಸೌಲಭ್ಯಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಈ ಸಂಘಗಳ ಅಭಿವೃದ್ಧಿಗಾಗಿ ಮೀಸಲಿಟ್ಟ ಹಣ ಖರ್ಚಾಗಿರುವ ಹಣ ಹಾಗೂ ಉಳಿಕೆ ಹಣ ಎಷ್ಟು ? (ಗ್ರಾಮ ಪಂಚಾಯಿತಿವಾರು ಸಂಪೂರ್ಣ ವಿವರ ನೀಡುವುದು)

## ಕಲಾವಿದರಿಗೆ ನೀಡುತ್ತಿರುವ ಮಾಶಾಸನ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೧ (೯೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಪ್ರತಿ ತಿಂಗಳು ಕಲಾವಿದರ ಮಾಶಾಸನ ಪಡೆಯಲು ಇರುವ ಮಾನದಂಡಗಳೇನು ; ಇದರ ಮೊತ್ತ ಎಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಆ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಪ್ರತಿ ತಿಂಗಳು ಮಾಶಾಸನ ಪಡೆಯುತ್ತಿರುವ ಒಟ್ಟು ಕಲಾವಿದರು ಎಷ್ಟು ? (ತಾಲ್ಲೂಕುವಾರು, ಕಲಾವಿದರ ಸಂಪೂರ್ಣ ಮಾಹಿತಿ ನೀಡುವುದು)

## ಎ.ಪಿ.ಎಲ್, ಬಿ.ಪಿ.ಎಲ್ ಹಾಗೂ ಅಂತ್ಯೋದಯ ಕಾರ್ಡ್‌ಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೨ (೯೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಎ.ಪಿ.ಎಲ್, ಬಿ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡ್‌ಗಳನ್ನು ಎಷ್ಟು ಕುಟುಂಬಗಳಿಗೆ ವಿತರಿಸಲಾಗಿದೆ ; ಬಾಕಿ ಉಳಿದಿರುವ ಅರ್ಜಿಗಳೆಷ್ಟು ; (ಗ್ರಾಮ ಪಂಚಾಯಿತಿವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ೩ ಜಿಲ್ಲೆಗಳಲ್ಲಿ ಅಕ್ಟೋಬರ್–೨೦೧೬ರ ವರೆಗೆ ಎಷ್ಟು ಬಿ.ಪಿ.ಎಲ್ ಕಾರ್ಡ್‌ಗಳನ್ನು ರದ್ದುಪಡಿಸಲಾಗಿದೆ ; ಇದಕ್ಕೆ ಕಾರಣಗಳೇನು ; (ಗ್ರಾಮ ಪಂಚಾಯಿತಿವಾರು ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಸದರಿ ೩ ಜಿಲ್ಲೆಗಳಲ್ಲಿ ನ್ಯಾಯಬೆಲೆ ಮತ್ತು ಸೀಮೆಎಣ್ಣೆ ವಿತರಕರುಗಳಿಂದ ಸಮರ್ಪಕವಾಗಿ ವಿತರಣೆಯಾಗದಿರುವ ಬಗ್ಗೆ ಎಷ್ಟು ದೂರುಗಳು ಬಂದಿದ್ದವು ; ಈ ದೂರುಗಳ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ತಾಲ್ಲೂಕುವಾರು, ಸಂಪೂರ್ಣ ವಿವರ ನೀಡುವುದು)

## ಪರಿಶಿಷ್ಟ ಜಾತಿ ಮತು ಪರಿಶಿಷ್ಟ ಪಂಗಡದವರಿಗೆ ನೀಡುತ್ತಿರುವ ಸೌಲಭ್ಯಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೩ (೯೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಅಂತರ್‌ಜಾತಿ ವಿವಾಹಿತರಿಗೆ ನೀಡಲಾಗುತ್ತಿರುವ ಸೌಲಭ್ಯಗಳೇನು ; ಆ ಸೌಲಭ್ಯಗಳ ಸಂಪೂರ್ಣ ವಿವರ ನೀಡುವುದು ;

(ಆ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಅಂತರ್ಜಾತಿ ವಿವಾಹಿತ ಎಷ್ಟು ; ಫಲಾನುಭವಿಗಳಿಗೆ ಈ ಸೌಲಭ್ಯಗಳನ್ನು ನೀಡಲಾಗಿದೆ ; (ಫಲಾನುಭವಿವಾರು ಸಂಪೂರ್ಣ ವಿವರ ನೀಡುವುದು)

(ಇ) ಬಾಕಿ ಇರುವ ಪ್ರಕರಣಗಳೆಷ್ಟು ; ಅವುಗಳು ಯಾವುವು ? (ಜಿಲ್ಲಾವಾರು, ಫಲಾನುಭವಿಗಳವಾರು ಸಂಪೂರ್ಣ ವಿವರ ನೀಡುವುದು)

## ಅಂಗನವಾಡಿ ಮಕ್ಕಳಿಗೆ ಪ್ರತಿನಿತ್ಯ ಆಹಾರ ಸರಬರಾಜು ಮಾಡುವಲ್ಲಿ ಆಗಿರುವ ತೊಂದರೆ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೬೪ (೦೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಪ್ರತಿ ನಿತ್ಯದ ಆಹಾರವನ್ನು ಒದಗಿಸಲು ಬೇಕಾಗುವ ಆಹಾರ ಸಾಮಾಗ್ರಿಗಳನ್ನು ಆಯಾ ತಾಲ್ಲೂಕುಗಳಿಂದಲೇ ಕೊಳ್ಳುವ ಅವಕಾಶವನ್ನು ಈ ಹಿಂದೆ ನೀಡಿದ್ದು ನಿಜವೇ ;

(ಆ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಒಟ್ಟು ಸಂಖ್ಯೆ ಎಷ್ಟು ; ಪ್ರಸ್ತುತ ಸದರಿ ವ್ಯವಸ್ಥೆಯನ್ನು ಬದಲಿಸಿ ಕೇಂದ್ರೀಕೃತ ವ್ಯವಸ್ಥೆ ಮಾಡಿರುವುದು ನಿಜವೇ ; ಈ ರೀತಿ ಬದಲಾವಣೆ ಮಾಡಲು ಕಾರಣವೇನು ; ಈ ವ್ಯವಸ್ಥೆಯ ಕುರಿತು ವಿವರ ನೀಡುವುದು ?

# ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಡಿಯಲ್ಲಿನ ಅಕಾಡೆಮಿಗಳಿಗೆ ನೀಡಲಾದ ಅನುದಾನ ಸಮರ್ಪಕವಾಗಿ ಬಳಕೆಯಾಗದಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೬೫ (೦೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ಪ್ರಾಧಿಕಾರಗಳು (ಅಕಾಡೆಮಿಗಳು) ಯಾವುವು ;

(ಆ) ಕಳೆದ ೩ ವರ್ಷಗಳಿಂದ ಸದರಿ ಪ್ರಾಧಿಕಾರಗಳಿಗೆ ಸರ್ಕಾರವು ನೀಡಿರುವ ಅನುದಾನ ಹಾಗೂ ಆಗಿರುವ ವೆಚ್ಚದ ಕುರಿತು ವಿವರ ನೀಡುವುದು ;

(ಇ) ಕಳೆದ ಮೂರು ವರ್ಷಗಳಿಂದ ಸಂಪೂರ್ಣ ಬಳಕೆಯಾಗದೆ ಸರ್ಕಾರಕ್ಕೆ ವಾಪಸ್ಸಾದ ಅನುದಾನದ ಹಣವೆಷ್ಟು ; (ವಿವರ ನೀಡುವುದು)

(ಈ) ೨೦೧೪–೧೫ನೇ ಸಾಲಿನಲ್ಲಿ ಬಳಕೆಯಾಗದೆ ಉಳಿದಿರುವ ಹಣವನ್ನು ಸರ್ಕಾರವು ಹಿಂಪಡೆಯುತ್ತದೆ ಎನ್ನುವುದು ನಿಜವೇ ;

(ಉ) ಹೀಗೆ ಉಳಿದಿರುವ ಹಣದ ಸಮರ್ಪಕ ಬಳಕೆಯ ವಿವರ ನೀಡುವುದು ?

# ವೈದ್ಯಕೀಯ ಮಹಾವಿದ್ಯಾಲಯಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೬೬ (೬೫) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನ ಕೇಂದ್ರಗಳ ಸಂಖ್ಯೆ ಎಷ್ಟು ; (ಅವುಗಳ ಸಂಪೂರ್ಣ ವಿಳಾಸ, ದೂರವಾಣಿಗಳ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರವು ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಗಳಿಗೆ ಸರ್ಕಾರದಿಂದ ಬಿಡುಗಡೆ ಮಾಡಲಾದ ಅನುದಾನ ಎಷ್ಟು ; (ವರ್ಷವಾರು ಮಹಾವಿದ್ಯಾಲಯಗಳವಾರು ಮಾಹಿತಿ ನೀಡುವುದು)

(ಇ) ಬೀದರ್ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನ ಕೇಂದ್ರಕ್ಕೆ ಬಿಡುಗಡೆಯಾದ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳಾವುವು ; ಮತ್ತು ಯಾವ ಯಾವ ಉದ್ದೇಶಕ್ಕೆ ಹಣ ಖರ್ಚು ಮಾಡಲಾಗಿದೆ ;

(ಈ) ಖರ್ಚು ಮಾಡಿದ್ದಲ್ಲಿ, ಕಳೆದ ಮೂರು ವರ್ಷಗಳಿಂದ ಖರೀದಿಸಿದ ಬಿಲ್‌ನ ಪ್ರತಿ ಮತ್ತು ಅದರ ಸಂಪೂರ್ಣ ಮಾಹಿತಿ ನೀಡುವುದು ?

## ವಸತಿ ನಿಲಯಗಳಿಗೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೬೭ (೬೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಸುತ್ತಿರುವ ಹಾಸ್ಟೆಲ್‌ಗಳಲ್ಲಿ ಖರೀದಿಸಿದ ಆಹಾರ ಪದಾರ್ಥಗಳು ಮತ್ತು ಸಾಮಾಗ್ರಿಗಳಿಗೆ ಖರ್ಚು ಮಾಡಲಾದ ಹಣವೆಷ್ಟು ;

(ಆ) ಈ ಹಾಸ್ಟೆಲ್‌ಗಳಿಗಾಗಿ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು ; ಮತ್ತು ಖರ್ಚಾದ ಮೊತ್ತವೆಷ್ಟು ;

(ಇ) ಆಹಾರ ಪದಾರ್ಥ ಮತ್ತು ಇತರೆ ಸಾಮಾಗ್ರಿಗಳನ್ನು ಸರಬರಾಜು ಮಾಡುವ ಸಂಬಂಧದಲ್ಲಿ ಗುತ್ತಿಗೆಯನ್ನು ಯಾರಿಗೆ ನೀಡಲಾಗಿದೆ ; (ವಿವರ ನೀಡುವುದು)

(ಈ) ಹಾಸ್ಟಲ್‌ಗಳ ದುಸ್ಥಿತಿ ಬಗ್ಗೆ ಬಂದಿರುವ ದೂರುಗಳೆಷ್ಟು ; ಅವುಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸ್ಪಷ್ಟ ಮಾಹಿತಿಯ ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೬೮ (೬೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬, ೨೦೧೬–೧೭ನೇ ಸಾಲಿನವರೆಗೆ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆ ಅಡಿಯಲ್ಲಿ ಆರು ಜಿಲ್ಲೆಗಳಿಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಯಿಂದ ಬೀದರ್ ಜಿಲ್ಲೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ, ಹಾಗೂ ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಕಾಮಗಾರಿ ಕೈಗೊಂಡಿದ್ದಲ್ಲಿ, ಆಯಾ ಕಾಮಗಾರಿಯ ಸ್ಥಳದ ಮಾಹಿತಿ ಮತ್ತು ಕಾಮಗಾರಿಗೆ ತಗುಲಿದ ವೆಚ್ಚ ಬಿಡುಗಡೆಯಾದ ಅನುದಾನ ಎಷ್ಟು ? (ಕಾಮಗಾರಿವಾರು, ವರ್ಷವಾರು, ತಾಲ್ಲೂಕುಗಳವಾರು, ಸಂಪೂರ್ಣ ಮಾಹಿತಿ ನೀಡುವುದು)

## ಸಾಂಸ್ಕೃತಿಕ ಭವನಗಳ ನಿರ್ಮಾಣದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೬೯ (೬೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ರಾಜ್ಯದಲ್ಲಿ ಸಾಂಸ್ಕೃತಿಕ ಭವನಗಳ ನಿರ್ಮಾಣಕ್ಕಾಗಿ ಸರ್ಕಾರವು ನಿಗಧಿಗೊಳಿಸಿರುವ ಅನುದಾನ ಎಷ್ಟು ; ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ವಿವರ ನೀಡುವುದು)

(ಆ) ೨೦೧೫–೨೦೧೬ ಮತ್ತು ೨೦೧೬–೧೭ನೇ ಸಾಲಿನವರೆಗೆ ಮಂಜೂರು ಮಾಡಿರುವ ಭವನಗಳ ಸಂಖ್ಯೆ ಎಷ್ಟು ;

(ಇ) ಬೀದರ್ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳಿಗೆ ಮಂಜೂರು ಮಾಡಿರುವ ಭವನಗಳ ಸಂಖ್ಯೆ ಎಷ್ಟು ; (ಅವುಗಳ ಸಂಪೂರ್ಣ ವಿವರ ನೀಡುವುದು)

(ಈ) ಮಂಜೂರು ಮಾಡದಿದ್ದಲ್ಲಿ, ಕಾರಣಗಳೇನು ? (ಸ್ಪಷ್ಟ ಮಾಹಿತಿ ನೀಡುವುದು)

## ಆಸ್ಪತ್ರೆಗಳಲ್ಲಿ ವೆಂಟಿಲೇಟರ್ ಸೌಲಭ್ಯದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೭೦ (೬೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಿರುವಂತೆ ರಾಜ್ಯದ ಜಿಲ್ಲಾ ಆಸ್ಪತ್ರೆಗಳಲ್ಲಿ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ವೆಂಟಿಲೇಟರ್‌ಗಳ ಸಹಿತ ತೀವ್ರ ನಿಗಾ ಘಟಕ ಸ್ಥಾಪಿಸುವ ಯೋಜನೆ ಯಾವ ಹಂತದಲ್ಲಿದೆ ;

(ಆ) ರಾಜ್ಯದ ಎಷ್ಟು ಆಸ್ಪತ್ರೆಗಳಲ್ಲಿ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ವೆಂಟಿಲೇಟರ್‌ಗಳ ಸಹಿತ ತೀವ್ರ ನಿಗಾ ಘಟಕವನ್ನು ಸ್ಥಾಪಿಸಲಾಗಿದೆ ? (ಆಯಾಯ ಆಸ್ಪತ್ರೆಗಳವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೭೧ (೩೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಸಂಖ್ಯೆಯೆಷ್ಟು ; ಈ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಯೆಷ್ಟು ; (ವಿಧಾನಸಭಾ ಕ್ಷೇತ್ರಗಳವಾರು ಸಂಪೂರ್ಣ ವಿವರಗಳನ್ನು ನೀಡುವುದು)

(ಆ) ಈ ವಸತಿ ಶಾಲೆಗಳು ಎಷ್ಟು ಸ್ವಂತ ಕಟ್ಟಡಗಳಲ್ಲಿ ಹಾಗೂ ಎಷ್ಟು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿವೆ ; (ವಿಧಾನಸಭಾ ಕ್ಷೇತ್ರಗಳವಾರು ವಿವರಗಳನ್ನು ನೀಡುವುದು)

(ಇ) ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಸತಿ ಶಾಲೆಗಳಿಗೆ ಸರ್ಕಾರ ನೀಡುತ್ತಿರುವ ಬಾಡಿಗೆ ಮೊತ್ತವೆಷ್ಟು ; (ವಿಧಾನಸಭಾ ಕ್ಷೇತ್ರಗಳವಾರು ವಿವರಗಳನ್ನು ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಈ ವಸತಿ ಶಾಲೆಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಪ್ರತಿ ವಸತಿ ನಿಲಯಗಳಿಗೆ ಎಷ್ಟು ಪ್ರಮಾಣದ ಅನುದಾನವನ್ನು ನಿಗಧಿಪಡಿಸಿ ಬಿಡುಗಡೆ ಮಾಡಲಾಗಿದೆ ? (ವಿಧಾನಸಭಾ ಕ್ಷೇತ್ರಗಳವಾರು ವಿವರಗಳನ್ನು ನೀಡುವುದು)

## ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಪಡಿತರ ಚೀಟಿ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೭೨ (೩೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ವಿತರಿಸಲಾಗಿರುವ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಖಾಸಗಿ ಬಯೋಮೆಟ್ರಿಕ್ ಕೇಂದ್ರಗಳಲ್ಲಿ ಇಲಾಖೆ ಅಧಿಕಾರಿಗಳೇ ಪಡಿತರ ಚೀಟಿಗಳನ್ನು ಮುದ್ರಿಸಿ ಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಬಿ.ಪಿ.ಎಲ್. ಪಡಿತರ ಚೀಟಿಗಳನ್ನು ಇಲಾಖೆಯವರೇ ಉದ್ದೇಶ ಪೂರ್ವಕವಾಗಿ ರದ್ದುಪಡಿಸಿ, ಹೊಸ ಅರ್ಜಿ ಸಲ್ಲಿಸಲು ಸೂಚಿಸುತ್ತಿರುವುದರಿಂದ, ಬಡವರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

# ೨೦೧೩-೧೪ ರಿಂದ ಹಾವೇರಿ ಜಿಲ್ಲೆಯಲ್ಲಿ ವಿವಿಧ ಯೋಜನೆಗಳಡಿಯಲ್ಲಿ ಕೊರೆದ ಕೊಳವೆ ಬಾವಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೭೩ (೫೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩-೨೦೧೪ರಿಂದ ಹಾವೇರಿ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ವಿವಿಧ ಯೋಜನೆಗಳಡಿಯಲ್ಲಿ ಕೊರೆದ ಕೊಳವೆ ಬಾವಿಗಳೆಷ್ಟು ; ಹಾಗೂ ಗಂಗಾ ಕಲ್ಯಾಣ ಬಾವಿಗಳೆಷ್ಟು ; (ಯೋಜನೆವಾರು, ವರ್ಷವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೊರೆದ ಕೊಳವೆ ಬಾವಿ ಫಲಾನುಭವಿಗಳಲ್ಲಿ, ವಿದ್ಯುತ್ ಸಂಪರ್ಕ ಮೋಟಾರು, ಪೈಪ್, ಪೂರೈಸಿದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಯೋಜನೆವಾರು, ವರ್ಷವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಉಳಿದ ಫಲಾನುಭವಿಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಫಲಾನುಭವಿಗಳಿಗೆ ಯಾವ ಯಾವ ವರ್ಷ ಕೊಳವೆ ಬಾವಿ ಕೊರೆಸಲಾಗಿದೆ ; ಇವರಿಗೆ ವಿದ್ಯುತ್ ಸಂಪರ್ಕ, ಮೋಟಾರ್, ಪೈಪ್ ಎಲ್ಲಾ ಸಲಕರಣೆಗಳನ್ನು ಪೂರೈಸದೆ ಇರುವುದಕ್ಕೆ ಕಾರಣಗಳೇನು ? (ಯೋಜನಾವಾರು, ವರ್ಷವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

## ಪಡಿತರ ವಸ್ತು ವಿತರಣೆ ಕೂಪನ್ ವ್ಯವಸ್ಥೆಯಲ್ಲಿ ದೋಷವಿರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೭೪ (೫೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಡಿತರ ವಸ್ತು ವಿತರಣೆಗೆ ಜಾರಿಗೆ ತಂದಿರುವ ಕೂಪನ್ ವ್ಯವಸ್ಥೆಯಲ್ಲಿ ದೋಷವಿರುವುದು ನಿಜವೇ ;

(ಆ) ಸರ್ಕಾರ ಜಾರಿಗೆ ತಂದಿರುವ ಕೂಪನ್ ವ್ಯವಸ್ಥೆಯಲ್ಲಿ ನಕಲಿ ಕೂಪನ್‌ಗಳಿಂದ ಪಡಿತರ ವಸ್ತು ಲೂಟಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಅವ್ಯವಹಾರದಲ್ಲಿ ಭಾಗಿಯಾದ ಅಧಿಕಾರಿ, ಫ್ರಾಂಚೈಸಿ ಮತ್ತು ಮಳಿಗೆ ಮಾಲೀಕರ ಮೇಲೆ ಕೈಗೊಂಡ ಕ್ರಮಗಳೇನು ;

(ಈ) ನಕಲಿ ಕೂಪನ್ ಹಾವಳಿ ತಡೆಯಲು ಸರ್ಕಾರ ಯಾವ ಯಾವ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದ ಅಂಗನವಾಡಿ ಕೇಂದ್ರಗಳಿಗೆ ಪೂರಕ ಪೌಷ್ಠಿಕ ಆಹಾರ ಒದಗಿಸುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೭೫ (೫೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ಗರ್ಭಿಣಿ / ಬಾಣಂತಿಯರಿಗೆ ಪೂರಕ ಪೌಷ್ಠಿಕ ಆಹಾರ ಒದಗಿಸಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಯಾವ ಕ್ಯಾಲೋರಿಯ ಆಹಾರ ಒದಗಿಸಲಾಗುತ್ತಿದೆ ; ಎಷ್ಟು ದಿನಗಳಿಗೊಮ್ಮೆ ನೀಡಲಾಗುತ್ತಿದೆ ;

(ಇ) ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ಪ್ರತಿ ಗರ್ಭಿಣಿ ಹಾಗೂ ಬಾಣಂತಿಯರಿಗೆ ಸೂಕ್ತ ಆರೋಗ್ಯ ತಪಾಸಣೆ ಹಾಗೂ ರೋಗ ನಿರೋಧಕ ಚುಚ್ಚುಮದ್ದುಗಳನ್ನು ಆರೋಗ್ಯ ಇಲಾಖೆಯ ಸಹಕಾರದೊಂದಿಗೆ ನೀಡಲಾಗುತ್ತಿದೆಯೇ ;

(ಈ) ಹಾಗಿದ್ದಲ್ಲಿ, ೨೦೧೩–೧೪ರಿಂದ ಇಲ್ಲಿಯವರೆಗೆ ಯಾವ ಜಿಲ್ಲೆ, ತಾಲ್ಲೂಕುಗಳಲ್ಲಿ ಯಾವ–ಯಾವ ಅಂಗನವಾಡಿಗಳಲ್ಲಿ ಎಷ್ಟು ಮಂದಿಗೆ ಈ ಸೌಲಭ್ಯ ನೀಡಲಾಗಿದೆ ; (ಹಾವೇರಿ ಜಿಲ್ಲೆಯ ಸಮಗ್ರ ವಿವರದೊಂದಿಗೆ, ಉಳಿದ ಜಿಲ್ಲೆಗಳ ಜಿಲ್ಲಾವಾರು ವಿವರ ನೀಡುವುದು)

(ಉ) ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಅಂಗನವಾಡಿಗಳಿಗೆ ವಿತರಿಸುವ ಪೌಷ್ಠಿಕ ಆಹಾರ ಸರಬರಾಜಿನಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಜಿಲ್ಲಾವಾರು ಪ್ರಕರಣವಾರು ವಿವರ ನೀಡುವುದು)

## ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚ ಭರಿಸುವ ಬಾಲಸಂಜೀವಿನಿ ಯೋಜನೆ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೭೬ (೫೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಪೌಷ್ಟಿಕ ಮಕ್ಕಳ ವೈದ್ಯಕೀಯ ವೆಚ್ಚ ಭರಿಸುವ ಯೋಜನೆಯಡಿ "ಬಾಲಸಂಜೀನಿ" ಎಂಬ ಉಪ ಯೋಜನೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಈ ಯೋಜನೆಯ ರೂಪರೇಷೆಗಳೇನು ; ಈ ಯೋಜನೆಯಲ್ಲಿ ಯಾವ ಯಾವ ಖಾಯಿಲೆ ಮತ್ತು ಎಷ್ಟು ಖಾಯಿಲೆಗಳಿಗೆ ಉಚಿತ ಚಿಕಿತ್ಸೆ ನೀಡಲಾಗುವುದು ;

(ಇ) ಪ್ರತಿ ಮಗುವಿನ ಚಿಕಿತ್ಸೆಗೆ ನಿಗದಿಪಡಿಸಿರುವ ಗರಿಷ್ಠ ಮೊತ್ತವೆಷ್ಟು ; ನವಜಾತ ಶಿಶುವಿನ ಆರೈಕೆ ಹಾಗೂ ಚಿಕಿತ್ಸೆಗೆ ನಿಗಧಿಪಡಿಸಿದ ಗರಿಷ್ಠ ಮೊತ್ತವೆಷ್ಟು ; ಮಗುವಿನ ತಂದೆ / ತಾಯಿಯವರಿಗೆ ಪ್ರಯಾಣ ಭತ್ಯೆ ನೀಡಲಾಗುತ್ತಿದೆಯೇ ; ನೀಡುತ್ತಿದ್ದಲ್ಲಿ ಅದರ ಮೊತ್ತ ಎಷ್ಟು ;

(ಈ) ಈ ಯೋಜನೆಯಡಿ ರಾಜ್ಯದ ಎಷ್ಟು ಆಸ್ಪತ್ರೆಗಳಲ್ಲಿ (ಘಟಕ) ಚಿಕಿತ್ಸೆ ಪಡೆಯಬಹುದು ; ಅವು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಈ ಯೋಜನೆಯಡಿ ಪ್ರಾರಂಭದಿಂದ ಇಲ್ಲಿಯವರೆಗೆ ಯಾವ ಯಾವ ಆಸ್ಪತ್ರೆ (ಘಟಕ)ಗಳಲ್ಲಿ ಎಷ್ಟೆಷ್ಟು ಮಕ್ಕಳಿಗೆ ಯಾವ ಯಾವ ಖಾಯಿಲೆಗಳಿಗೆ ಎಷ್ಟೆಷ್ಟು ಅನುದಾನ ಖರ್ಚಾಗಿದೆ ? (ಜಿಲ್ಲಾವಾರು, ಆಸ್ಪತ್ರೆವಾರು ಸಂಪೂರ್ಣ ವಿವರ ನೀಡುವುದು)

## ಬಾಲ್ಯ ವಿವಾಹ ಪದ್ಧತಿಯನ್ನು ತಡೆಯುವ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೭೭ (೫೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದೀಚೆಗೆ ಎಷ್ಟು ಬಾಲ್ಯ ವಿವಾಹ ಪ್ರಕರಣಗಳು ದಾಖಲಾಗಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಾನೂನು ಪ್ರಕಾರ ಕಠಿಣ ಶಿಕ್ಷೆಗೆ ಅವಕಾಶವಿದ್ದರೂ, ಈ ಅನಿಷ್ಟ ಪದ್ಧತಿಗಳು ಮುಂದುವರೆಯಲು ಕಾರಣಗಳೇನು ; ಈ ಅನಿಷ್ಟ ಪದ್ಧತಿಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಸಾಮೂಹಿಕ ವಿವಾಹಗಳಲ್ಲೇ ಬಾಲ್ಯ –ವಿವಾಹಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸಾಮೂಹಿಕ ವಿವಾಹಗಳಲ್ಲಿ ಇಂತಹ ಅಚಾತುರ್ಯಗಳು ನಡೆಯುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪ್ರಾದೇಶಿಕ ಹಾಗೂ ಜಿಲ್ಲಾ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಗಳ ಹಾಗೂ ಪ್ಲಾನಿಟೋರಿಯಮ್‌ಗಳ ಕುರಿತು

**ಶ್ರೀ ಎಸ್. ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ):–**

೭೮ (೧೦೧) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಪ್ರಾದೇಶಿಕ ವಿಜ್ಞಾನ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ ; (ವಿವರ ನೀಡುವುದು)

(ಆ) ಪ್ರತಿ ಕೇಂದ್ರ ಸ್ಥಾಪಿಸುವಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಬಿಡುಗಡೆ ಮಾಡಿದ ಅನುದಾನದ ಪ್ರಮಾಣ ಎಷ್ಟು ;

(ಇ) ಅದೇ ರೀತಿ ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಸ್ಥಾಪಿಸಲಾಗಿದೆ ; (ವಿವರ ನೀಡುವುದು)

(ಈ) ಈ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸುವಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಬಿಡುಗಡೆ ಮಾಡಿದ ಅನುದಾನ ಎಷ್ಟು ;

(ಉ) ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಹೊಸ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಗಳನ್ನು ಸ್ಥಾಪನೆ ಮಾಡುವ ಯೋಜನೆ ಸರ್ಕಾರ ಹೊಂದಿದೆ ; ಇದರಲ್ಲಿ ಗದಗ ಜಿಲ್ಲೆ ಸೇರ್ಪಡೆಯಾಗಿದೆಯೇ ;

(ಊ) ರಾಜ್ಯದಲ್ಲಿ ಎಷ್ಟು ದೊಡ್ಡ, ಮಧ್ಯಮ ಹಾಗೂ ಸಣ್ಣ ಪ್ರಮಾಣದ ಪ್ಲಾನಿಟೋರಿಯಮ್‌ಗಳು ಕಾರ್ಯ ನಿರ್ವಹಿಸುತ್ತಿವೆ ; (ವಿವರ ನೀಡುವುದು)

(ಋ) ಪ್ರತಿ ದೊಡ್ಡ, ಮಧ್ಯಮ ಹಾಗೂ ಸಣ್ಣ ಪ್ರಮಾಣದ ಪ್ಲಾನಿಟೋರಿಯಮ್‌ಗಳ ಸ್ಥಾಪನೆಗೆ ವೆಚ್ಚವಾಗುವ ಹಣವೆಷ್ಟು ; ಇವುಗಳ ಸ್ಥಾಪನೆಗೆ ಕೇಂದ್ರ ಸರ್ಕಾರ ಅನುದಾನ ನೀಡುತ್ತಿದೆಯೇ ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ನೀಡಲಾಗುತ್ತಿದೆ ;

(ಎ) ೨೦೧೬–೧೭ನೇ ಸಾಲಿನಲ್ಲಿ ಸರ್ಕಾರ ಯಾವ ಯಾವ ಭಾಗಗಳಲ್ಲಿ ಎಷ್ಟು ಪ್ಲಾನಿಟೋರಿಯಮ್‌ಗಳನ್ನು ಸ್ಥಾಪನೆ ಮಾಡುವ ಉದ್ದೇಶ ಹೊಂದಿದೆ ; ಪ್ರತಿ ಪ್ಲಾನಿಟೋರಿಯಮ್‌ಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ?

## ಮೆಟ್ರಿಕ್ ನಂತರದ ವಸತಿ ನಿಲಯಗಳಲ್ಲಿ ಪ್ರವೇಶ ಪ್ರಕ್ರಿಯೆಯ ಕುರಿತು

**ಶ್ರೀ ಎಸ್. ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ):–**

೭೯ (೧೦೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಮೆಟ್ರಿಕ್ ನಂತರದ ಯಾವ ಯಾವ ವಸತಿ ನಿಲಯಗಳು ಕಾರ್ಯ ನಿರ್ವಹಿಸುತ್ತಿವೆ ; (ವಿವರ ನೀಡುವುದು)

(ಆ) ಈ ಮೆಟ್ರಿಕ್ ನಂತರದ ವಸತಿ ನಿಲಯಗಳಿಗೆ ಹೊಸದಾಗಿ ಪ್ರವೇಶ ನೀಡುವ ಪ್ರಕ್ರಿಯೆಯನ್ನು ಜುಲೈ ೩೧ರ ಒಳಗೆ ಮುಗಿಸಬೇಕು ಎಂಬ ನಿಯಮಾವಳಿಯನ್ನು ರೂಪಿಸಿದ್ದು ನಿಜವೇ ;

(ಇ) ಹಾಗಿದ್ದಲ್ಲಿ, ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಈ ನಿಯಮಾವಳಿಯಂತೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ತಿಗೊಳಿಸಲಾಗಿದೆ ; ಮತ್ತು ಎಷ್ಟು ಜಿಲ್ಲೆಗಳಲ್ಲಿ ಈ ನಿಯಮಾವಳಿಗಳನ್ನು ಪಾಲಿಸಿರುವುದಿಲ್ಲ ?

## ಬೀದರ್ ಜಿಲ್ಲೆಯ ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೦ (೪೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಗೆ ಮಂಜೂರಾದ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಸ್ವಂತ ಕಟ್ಟಡಗಳನ್ನು ಹೊಂದಿರುವ ಮತ್ತು ಬಾಡಿಗೆ ಕಟ್ಟಡಗಳಲ್ಲಿರುವ ಕೇಂದ್ರಗಳೆಷ್ಟು ; (ವಿವರ ನೀಡುವುದು)

(ಇ) ಸದರಿ ಅಂಗನವಾಡಿಗಳ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಸರ್ಕಾರದಿಂದ ಮಂಜೂರಾದ ಅನುದಾನ ಎಷ್ಟು ; ಆ ಪೈಕಿ ವೆಚ್ಚ ಮಾಡಲಾದ ಅನುದಾನ ಎಷ್ಟು ; (ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಕಟ್ಟಡ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೀದರ್ ಜಿಲ್ಲೆಯ ಮಹಿಳಾ ವಿದ್ಯಾರ್ಥಿ ನಿಲಯಗಳಿಗೆ ಭದ್ರತೆ ಒದಗಿಸುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೧ (೩೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಸವಾಜ ಕಲ್ಯಾಣ ಇಲಾಖೆಯಿಂದ ನಡೆಸಲಾಗುತ್ತಿರುವ ಒಟ್ಟು ಮಹಿಳಾ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದರಲ್ಲಿ ಎಷ್ಟು ಮಹಿಳಾ ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳನ್ನು ಹೊಂದಿದೆ ; ಎಷ್ಟು ಬಾಡಿಗೆ ಕಟ್ಟಡಗಳನ್ನು ಹೊಂದಿದೆ ; (ಅವುಗಳ ವಿವರ ನೀಡುವುದು)

(ಇ) ಈ ವಿದ್ಯಾರ್ಥಿನಿಲಯದಲ್ಲಿರುವ ಮಹಿಳಾ ವಿದ್ಯಾರ್ಥಿಗಳ ಸುರಕ್ಷತೆಗಾಗಿ ಸರ್ಕಾರ ಯಾವ ಯಾವ ಭದ್ರತಾ ವ್ಯವಸ್ಥೆಯನ್ನು ಕೈಗೊಂಡಿರುತ್ತದೆ ?

## ಬೀದರ್ ಜಿಲ್ಲೆಯಲ್ಲಿ ಸಮುದಾಯ ಭವನಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೨ (೪೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಿಂದ ಡಾ॥ ಬಿ.ಆರ್. ಅಂಬೇಡ್ಕರ್ ಹಾಗೂ ಡಾ॥ ಬಾಬು ಜಗಜೀವನ್‌ರಾಂರವರ ಎಷ್ಟು ಭವನಗಳನ್ನು ನಿರ್ಮಾಣ ಮಾಡಲು ಮಂಜೂರಾತಿ ನೀಡಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ಈ ಭವನಗಳನ್ನು ಮಂಜೂರು ಮಾಡಲು ಸರ್ಕಾರವು ಅನುಸರಿಸಿರುವ ನಿಯಮಗಳಾವುವು ;

(ಇ) ಈ ಭವನಗಳಿಗೆ ೨ ವರ್ಷಗಳಲ್ಲಿ ಮಂಜೂರು ಮಾಡಿರುವ ಅನುದಾನ ಎಷ್ಟು ; ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಮೈಸೂರು–ಚಾಮರಾಜನಗರ ಜಿಲ್ಲೆಗಳ ವಸತಿ ಗೃಹಗಳ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೩ (೩೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು–ಚಾಮರಾಜನಗರ ಜಿಲ್ಲೆಗಳಲ್ಲಿರುವ ಹಿಂದುಳಿದ ಮತ್ತು ಸಮಾಜ ಕಲ್ಯಾಣ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಹಿಂದುಳಿದ ಮತ್ತು ಸಮಾಜ ಕಲ್ಯಾಣ ಇಲಾಖೆಗಳ ವಿದ್ಯಾರ್ಥಿನಿಲಯಗಳಲ್ಲಿ ಮೂಲಭೂತ ಸೌಕರ್ಯಗಳ ಲಭ್ಯತೆ ಇಲ್ಲದೆ ವಿದ್ಯಾರ್ಥಿಗಳು ತೊಂದರೆಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಸದರಿ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಮೈಸೂರು–ಚಾಮರಾಜನಗರ ಜಿಲ್ಲೆಗಳ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೪ (೩೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು–ಚಾಮರಾಜನಗರ ಜಿಲ್ಲೆಗಳಲ್ಲಿ ಕೆಲವು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರುಗಳಿಲ್ಲದೆ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ವೈದ್ಯರನ್ನು ನೇಮಕ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ಮಾಹಿತಿ ನೀಡುವುದು)

## ಮೈಸೂರು–ಚಾಮರಾಜನಗರ ಜಿಲ್ಲೆಗಳಲ್ಲಿ ಅಂಗನವಾಡಿ ಕೇಂದ್ರಗಳಿಗೆ ಕಟ್ಟಡ ಒದಗಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೫ (೩೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು–ಚಾಮರಾಜನಗರ ಜಿಲ್ಲೆಗಳಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕೆಲವು ಅಂಗನವಾಡಿ ಕೇಂದ್ರಗಳಿಗೆ ಕಟ್ಟಡಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂಗನವಾಡಿ ಕೇಂದ್ರಗಳಿಗೆ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

**ಶ್ರೀನಿವಾಸ**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0183/700 ಪ್ರತಿಗಳು/09–11–2016